ಸಂಪುಟ : 10 ಸಂಚಿಕೆ: 63 ಪುಟ : 4+2 ಬೆಲೆ: 3.00 ಮಂಗಳವಾರ ಏಪ್ರಿಲ್ 8 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 63 Pages : 4+2 Price : 3.00 Tuesday April 8 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಮೌಲ್ಯಮಾಪನ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಮಾರ್ಚ್ / ಎಪ್ರಿಲ್ 2025 ರ ಮಾಹೆಯಲ್ಲಿ ನಡೆಸಿದ ಎಸ್.ಎಸ್.ಎಲ್. ಸಿ ಪರೀಕ್ಷೆ ಉತ್ತರ ಪತ್ರಿಕೆಯ ಮೌಲ್ಯಮಾಪನ ಕಾರ್ಯವು ಗದಗ ನಗರದ 06 ಮೌಲ್ಯಮಾಪನ ಕೇಂದ್ರಗಳಲ್ಲಿ ಎಪ್ರಿಲ್ 15 ರಿಂದ ಎಪ್ರಿಲ್ 24 ರ ವರಗೆ ನಡೆಯಲಿದೆ.

ಈ ಪರೀಕ್ಷಾ ಮೌಲ್ಯಮಾಪನಗಳು ಸುಗಮವಾಗಿ ಜರುಗುವ ಮತ್ತು ಶಿಸ್ತು , ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮೌಲ್ಯಮಾಪನ ಕಾರ್ಯಗಳಿಗಾಗಿ ನೇಮಿಸಲಾದ ಸಿಬ್ಬಂದಿಯ ಹೊರತಾಗಿ ಬೇರೆ ಯಾವುದೇ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಮೌಲ್ಯಮಾಪನ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ಎಪ್ರಿಲ್ 15 ರಿಂದ 24 ರವರೆಗೆ ಮೌಲ್ಯಮಾಪನ ಕಾರ್ಯಗಳಿಗಾಗಿ ನೇಮಿಸಲಾದ ಸಿಬ್ಬಂದಿಯನ್ನು ಹೊರತುಪಡಿಸಿ ಬೇರೆ ಯಾವುದೇ ಅನಧಿಕೃತ ವ್ಯಕ್ತಿಗಳ ಅಥವಾ ವ್ಯಕ್ತಿಯ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ತಿಳಿಸಿದ್ದಾರೆ.

**ಮೌಲ್ಯಮಾಪನ ಕೇಂದ್ರಗಳ ವಿವರ ಇಂತಿದೆ**

ಸೇಂಟ್ ಜಾನ್ ಪ್ರೌಡಶಾಲೆ, ಗದಗ ಬೇಟಗೇರಿ; ಲೊಯೋಲಾ ಪ್ರೌಢಶಾಲೆ, ಪಾಲಾ ಬದಾಮಿ ರಸ್ತೆ ಗದಗ ; ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಪ್ರೌಡಶಾಲೆ, ಓಕ್ಕಲಗೇರಿ ಗದಗ ; ಮಹಾವೀರ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಕನಕ ಭವನ ಹತ್ತಿರ ಗದಗ; ಜಗದ್ಗುರು ತೋಂಟದಾರ್ಯ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಭೂಮರಡ್ಡಿ ಸರ್ಕಲ್ ಹತ್ತಿರ ಗದಗ; ಬಸವೇಶ್ವರ ಪ್ರಾಥಮಿಕ ಶಾಲೆ ಗದಗ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 2025 ರ ದ್ವಿತೀಯ ಪಿಯುಸಿ ಪರೀಕ್ಷೆ-1 ನ್ನು ಈಗಾಗಲೇ ನಡೆಸಲಾಗಿದ್ದು ಎಲ್ಲ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವು ಮುಕ್ತಾಯವಾಗಿದೆ. ದ್ವಿತಿಯ ಪಿಯುಸಿ ಪರೀಕ್ಷೆ-1 ರ ಫಲಿತಾಂಶ ಪ್ರಕಟಿಸುವ ಸಂಬಂಧ ದಿನಾಂಕ 8-4-2025 ರಂದು ಮಧ್ಯಾಹ್ನ 12.30 ಗಂಟೆಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಲ್ಲಿ ಮಾನ್ಯ ಸಚಿವರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸುದ್ದಿಗೋಷ್ಠಿ ಕರೆಯಲಾಗಿದೆ. ಫಲಿತಾಂಶವನ್ನು **https://karresults.nic.in** ಜಾಲತಾಣದಲ್ಲಿ ಎಪ್ರಿಲ್ 8 ರ ಮಧ್ಯಾಹ್ನ 1.30 ಗಂಟೆಯ ನಂತರ ವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಣೆ ತಿಳಿಸಿದೆ.

**ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಜಿಲ್ಲಾ ಮಟ್ಟದ ಸಂವಾದ ಸಭೆ**

# ಅಸಮತೋಲನ ನಿವಾರಣೆಗೆ ಸರ್ಕಾರದೊಂದಿಗೆ ಕೈಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾದೇಶಿಕ ಅಸಮತೋಲನವು ರಾಜ್ಯದ ಆರ್ಥಿಕ ವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮ ಬೀರಲಿದ್ದು, ಹಿಂದುಳಿದ ಪ್ರದೇಶಗಳ ಅಭಿವೃದ್ಧಿಗೆ ಕ್ರಮ ಕೈಗೊಂಡು ಪ್ರಾದೇಶಿಕ ಅಸಮತೋಲನ ಹೋಗಲಾಡಿಸಲು ಸರ್ಕಾರದ ಜೊತೆಗೆ ಸಂಘ-ಸಂಸ್ಥೆಗಳು ಕೈ ಜೋಡಿಸಬೇಕು ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ವಿತ್ತೀಯ ಸುಧಾರಣೆ ಮತ್ತು ಯೋಜನಾ ಇಲಾಖೆಯ ಕಾರ್ಯದರ್ಶಿ ಡಾ. ವಿಶಾಲ್ ಆರ್ ತಿಳಿಸಿದರು. ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಜಿಲ್ಲಾ ಮಟ್ಟದ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದಂತೆ ಡಾ. ಡಿ.ಎಂ. ನಂಜುಂಡಪ್ಪ ವರದಿಯ ಅನುಷ್ಠಾನದಿಂದ ತಾಲೂಕುಗಳು



ಅಭಿವೃದ್ಧಿ ಹೊಂದಿರುವ ಬಗ್ಗೆ ಹಾಗೂ ಅಭಿವೃದ್ಧಿ ಹೊಂದದೇ ಇರುವ ತಾಲೂಕುಗಳನ್ನು ಗುರುತಿಸಿ ಹೊಸದಾಗಿ ಸೂಚ್ಯಂಕವನ್ನು ಕಂಡುಹಿಡಿದು ಪ್ರಾದೇಶಿಕ ಅಸಮತೋಲನವನ್ನು ನಿವಾರಣೆ ಮಾಡಲು ರಾಜ್ಯ ಸರ್ಕಾರವು ಆರ್ಥಿಕ ತಜ್ಞರಾದ ಪ್ರೊ. ಎಂ.ಗೋವಿಂದರಾವ್ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದೆ ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಜಿಲ್ಲೆಯಲ್ಲಿನ ಅತ್ಯಂತ ಹಳೆಯದಾದ, ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳನ್ನು ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಾಣದ ಕೆಲಸವಾಗಬೇಕು. ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಎಂದು ಸಭೆಗೆ ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಜಿಲ್ಲೆಯಲ್ಲಿ ಶಿಂಗಟಾಲೂರು ಏತ ನೀರಾವರಿ ಫೇಸ್-1 ಕೆಲಸ ಆಗಿದೆ. 2 ಮತ್ತು 3ನೇ ಹಂತದ ಕೆಲಸವಾಗಬೇಕು. ಗುಣಮಟ್ಟದ ಶಿಕ್ಷಣ ಒದಗಿಸಲು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯಲ್ಲಿ ಸಾವಯವ ಕೃಷಿ ಮಾರುಕಟ್ಟೆ ನಿರ್ಮಾಣ, ಸಗಣಿ ಗೊಬ್ಬರ ಬ್ಯಾಂಕ್ ನಿರ್ಮಾಣ, ನೈಸರ್ಗಿಕ ಕೀಟ ಹತೋಟಿ ವಿಧಾನ, ಗೃಹ ಕೈಗಾರಿಕೆ, ರಸ್ತೆಗಳ ಅಭಿವೃದ್ಧಿ, ಹನಿ ನೀರಾವರಿ ಯೋಜನೆ, ರೇಷ್ಮೆ ಸಾಕಾಣಿಕೆ ತರಬೇತಿ, ಗುಣಮಟ್ಟದ ಬಿತ್ತನೆ ಬೀಜದ ವಿತರಣೆ, ಮಣ್ಣಿನ ಪರೀಕ್ಷಾ ಪ್ರಯೋಗಾಲಯ ಸ್ಥಾಪನೆ, ತ್ಯಾಜ್ಯ ನಿರ್ವಹಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಾರ್ವಜನಿಕರು ತಮ್ಮ ಅಭಿಪ್ರಾಯಗಳನ್ನು ಸಭೆಯ ಗಮನಕ್ಕೆ ತಂದರು.

ಸಭೆಯಲ್ಲಿ ಸಮಿತಿಯ ಸದಸ್ಯರಾದ ಎಸ್.ಟಿ. ಬಾಗಲಕೋಟಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಮಾಜಿ ಶಾಸಕ ಡಿ.ಆರ್. ಪಾಟೀಲ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ವಿವಿಧ ಇಲಾಖೆಯ ಅಧಿಕಾರಿಗಳು, ಸಂಘ-ಸಂಸ್ಥೆಗಳ ಮುಖ್ಯಸ್ಥರು, ಕೃಷಿಕರು, ಗಣ್ಯರು, ಸಂಘದ ಪದಾಧಿಕಾರಿಗಳು ಹಾಜರಿದ್ದರು.

> ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಿಲ್ಲೆಯಲ್ಲಿ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆಯನ್ನು ನೀಗಿಸಬೇಕು. ಶಾಲೆಯಲ್ಲಿ ಕಂಪ್ಯೂಟರ್ ಶಿಕ್ಷಣ ಸೇರಿದಂತೆ ಗುಣಾತ್ಮಕ ಶಿಕ್ಷಣಕ್ಕೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಸಾಕ್ಷರತಾ ಪ್ರಮಾಣ ಹೆಚ್ಚಾಗುವಂತೆ ಕ್ರಮ ವಹಿಸಬೇಕು ಎಂದು ಸಭೆಯ ಗಮನಕ್ಕೆ ತಂದರು.

> ತಾಲೂಕುಗಳ ಅಭಿವೃದ್ಧಿಗೆ ಅನುದಾನದ ಹಣ ಖರ್ಚಾದರೂ ಆರೋಗ್ಯ, ಮೂಲಭೂತ ಸೌಲಭ್ಯ, ಕೈಗಾರಿಕೆ, ಕೃಷಿ ಕ್ಷೇತ್ರಗಳಲ್ಲಿ ಕೆಲವು ತಾಲೂಕುಗಳು ಅಭಿವೃದ್ಧಿಯಲ್ಲಿ ಹಿಂದುಳಿದಿವೆ. ಇದಕ್ಕೆ ಸೂಕ್ತ ಕಾರಣಗಳನ್ನು ಪತ್ತೆ ಹಚ್ಚಿ ಅಸಮತೋಲನ ನಿವಾರಿಸಲು ಸೂಕ್ತ ಅಂಶಗಳನ್ನು ಸಮಿತಿಯು ಸರ್ಕಾರಕ್ಕೆ ಶಿಫಾರಸ್ಸು ಮಾಡಲಿದೆ. ಸಮಿತಿಯು ಹೊಸದಾಗಿ ಸೂಚ್ಯಂಕ ನಿಗದಿಪಡಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಂದ ಅಭಿಪ್ರಾಯ ಸಂಗ್ರಹಣೆ ಮಾಡುತ್ತಿದೆ.
>
> **– ಡಾ. ವಿಶಾಲ್ ಆರ್.**
> **ವಿತ್ತೀಯ ಸುಧಾರಣೆ,**
> **ಯೋಜನಾ ಇಲಾಖೆಯ ಕಾರ್ಯದರ್ಶಿ.**

**ಡಾ. ಅಂಬೇಡ್ಕರ್, ಡಾ. ಬಾಬು ಜಗಜೀವನರಾಮ್ ಜಯಂತಿ ಪೂರ್ವಭಾವಿ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ ಸೂಚನೆ**

# ಜಯಂತಿಗಳ ಆಚರಣೆ ಅರ್ಥಪೂರ್ಣವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 118ನೇ ಮತ್ತು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆಯ ಪ್ರಯುಕ್ತ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮ ಸ್ಥಳದ ಸ್ವಚ್ಛತೆ ಕುರಿತು ನಿಗಾ ವಹಿಸಬೇಕು. ಕಾರ್ಯಕ್ರಮದಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ಅಚ್ಚುಕಟ್ಟಾಗಿ ಜಯಂತಿ ಕಾರ್ಯಕ್ರಮ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ



ಮಹೇಶ ಪೋತದಾರ ಮಾತನಾಡಿ, ಎಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಜಯಂತಿಯ ವೇದಿಕೆ ಕಾರ್ಯಕ್ರಮವನ್ನು ಅಂದು ಬೆಳಿಗ್ಗೆ 11 ಗಂಟೆಗೆ ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಜರುಗಿಸಲಾಗುವುದು. ಜಯಂತಿ ನಿಮಿತ್ತ ಡಾ. ಬಿ.ಆರ್. ಅಂಬೇಡ್ಕರರ ಕುರಿತು ಕವನ ಸಂಕಲನ ಬಿಡುಗಡೆ ಮಾಡಲಾಗುವುದು.

ಜಯಂತಿ ಕುರಿತು ವಿವಿಧೆಡೆ ಬ್ಯಾನರ್ ಅಳವಡಿಕೆಗೆ ಕ್ರಮ ವಹಿಸಲಾಗಿದೆ. ಆಮಂತ್ರಣ ಪತ್ರಿಕೆ ಮುದ್ರಣ ಹಾಗೂ ಉಪನ್ಯಾಸಕರ ಆಯ್ಕೆ ಸೇರಿದಂತೆ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣುಗೋಗೇರಿ, ಭೂ ದಾಖಲೆಗಳ ಇಲಾಖೆ ಅಧಿಕಾರಿ ರುದ್ರಗೌಡ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಇದಕ್ಕೂ ಮುನ್ನ ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆ ಕುರಿತು ಪ್ರಗತಿ ಪರಿಶೀಲನೆ ನಡೆಸಿ, ಪ್ರಸ್ತುತ ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕೆಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರಲ್ಲದೆ, ಸಭೆಗೆ ಆಗಮಿಸುವಾಗ ಅಧಿಕಾರಿಗಳು ತಮ್ಮ ಇಲಾಖೆಗಳಿಗೆ ಸಂಬಂಧಪಟ್ಟಂತೆ ನಿಖರವಾದ ಮಾಹಿತಿ ಒದಗಿಸಬೇಕು. ಕಾಮಗಾರಿಗಳ ಅನುಷ್ಠಾನದಲ್ಲಿ ನಿಷ್ಕಾಳಜಿ ಮಾಡಬಾರದು ಎಂದು ಸೂಚಿಸಿದರು.

## ಪುರಾಣ ಪ್ರವಚನ ಇಂದಿನಿಂದ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಳೇಹೊಸೂರ ಗ್ರಾಮದಲ್ಲಿ ಎ.18 ಮತ್ತು 19ರಂದು ಶ್ರೀ ದಿಂಗಾಲೇಶ್ವರಮಠದ ಜಾತ್ರಾ ಮಹೋತ್ಸವ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಎ.8ರಿಂದ 18ವರೆಗೆ ಶ್ರೀಮಠದಲ್ಲಿ ನಿತ್ಯ ಸಂಜೆ 7ಕ್ಕೆ ಹಾನಗಲ್ಲ ಶ್ರೀ ಕುಮಾರೇಶ್ವರ ಪುರಾಣ ಪ್ರವಚನ ನಡೆಯಲಿದೆ. ಬೀಳಗಿಯ ಶ್ರೀ ಸಂಗನಬಸವ ಶ್ರೀಗಳು ಪುರಾಣ ಪ್ರವಚನಗೈಯುವರು. ಶ್ರೀಮಠದ ಸರ್ವಜ್ಞ ಗವಾಯಿಗಳು, ವಿರೇಶ್ವರ ಪುಣ್ಯಾಶ್ರಮದ ಕಲಾವಿದ ಪ್ರಕಾಶ ಸಂಗೀತ ಸೇವೆ ಮಾಡುವರು.

ಎ.18ರಂದು ಪ್ರಾತಃಕಾಲ ಶ್ರೀ ದಿಂಗಾಲೇಶ್ವರ ಕರ್ತೃ ಗುದ್ದುಗೆಗೆ ಮಹಾರುದ್ರಾಭೀಷೇಕ, ಲಿಂಗದೀಕ್ಷೆ, ಅಯ್ಯಾಚಾರ, ಷಟಸ್ಥಲ ಧ್ವಜಾರೋಹಣ, ಸಂಜೆ 5.30ಕ್ಕೆ ಮಹಾರಥೋತ್ಸವ ಜರುಗುವುದು. ಸಂಜೆ 7.30ಕ್ಕೆ ಪುರಾಣ ಮಂಗಲ ಹಾಗೂ ಧರ್ಮಸಭೆ ನಡೆಯಲಿದೆ.

ಎ.19ರಂದು ಸಂಜೆ 5.30ಕ್ಕೆ ಕಡುಬಿನ ಕಾಳಗವನ್ನು ಶ್ರೀ ಮಠ ಮತ್ತು ಶಿರಹಟ್ಟಿ ಭಾವೈಕ್ಯತಾ ಸಂಸ್ಥಾನಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ನೆರವೇರಿಸುವರು ಎಂದು ಪ್ರಕಟಣೆ ತಿಳಿಸಿದೆ.

**ಹಾವೇರಿಯಲ್ಲಿ ಎ.23ರಂದು ಲವ್ ಜಿಹಾದ್ ವಿರುದ್ಧ ಪ್ರತಿಭಟನೆ: ಕೆ.ಈ. ಕಾಂತೇಶ**

# ರಾಜ್ಯದಲ್ಲಿ ತುಘಲಕ್ ದರ್ಬಾರ್ ನಡೆಯುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಹಿಂದೂಗಳಿಗೆ ನೆಮ್ಮದಿ ಇಲ್ಲದಂತಾಗಿದೆ. ಇಲ್ಲಿ ತುಘಲಕ್ ದರ್ಬಾರ್ ನಡೆಯುತ್ತಿದ್ದು, ಲವ್ ಜಿಹಾದ್‌ಗೆ ಹಿಂದೂ ಮಹಿಳೆಯರು ಬಲೆಯಾಗುತ್ತಿದ್ದಾರೆ. ಹಲವು ದಿನಗಳ ಹಿಂದೆ ಹಾವೇರಿ ಜಿಲ್ಲೆಯ ಮಾಸೂರಿನ ಸ್ವಾತಿ ಲವ್ ಜಿಹಾದ್ ಬಲಿಯಾಗಿದ್ದಾಳೆ. ಇದನ್ನು ಖಂಡಿಸಿ ಎಪ್ರಿಲ್ 23ರಂದು ಹಾವೇರಿಯಲ್ಲಿ ರಾಯಣ್ಣ ಬ್ರಿಗೇಡ್ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕ್ರಾಂತಿವೀರ ಬ್ರಿಗೇಡ್‌ನ ರಾಜ್ಯ ಕಾರ್ಯದರ್ಶಿ ಕೆ.ಈ. ಕಾಂತೇಶ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಆರಂಭವಾಗುವ




ಪ್ರತಿಭಟನೆ ಸಿದ್ದಪ್ಪ ಸರ್ಕಲ್‌ವರೆಗೂ ನಡೆಯಲಿದ್ದು, ರಾಜ್ಯದ ವಿವಿಧ ಮಠಗಳ ಮಠಾಧೀಶರು ಭಾಗವಹಿಸಲಿದ್ದಾರೆ. ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಸೇರಿದಂತೆ ಅನೇಕ ಪ್ರಮುಖ ನಾಯಕರು ಭಾಗವಹಿಸಲಿದ್ದಾರೆ. ಸಿಎಂ ಸಿದ್ದರಾಮಯ್ಯ ಮುಸಲ್ಮಾನರಿಗೆ ಗುತ್ತಿಗೆಯಲ್ಲಿ ಶೇ. 4ರಷ್ಟು ಮೀಸಲಾತಿ ಘೋಷಿಸಿದ್ದಾರೆ. ಇವರಿಗೆ ಕೇವಲ ಮುಸಲ್ಮಾನರು ಮಾತ್ರ ಮತ ಹಾಕಿದ್ದಾರೆಯೇ ಅಥವಾ ಹಿಂದೂಗಳೂ ಮತ ಹಾಕಿದ್ದಾರೆಯೇ ಎಂದು ಪ್ರಶ್ನಿಸಿದರು.

ಲವ್ ಜಿಹಾದ್ ಬಲೆಗೆ ಸಿಲುಕಿ ಸ್ವಾತಿ ಕಗ್ಗೊಲೆಯಾಗಿದೆ. ಅದು ಲವ್ ಜಿಹಾದ್ ಅಲ್ಲ ಎಂದು ರಾಜ್ಯ ಸರ್ಕಾರ ವಾದ ಮಾಡುತ್ತಿದೆ. ರಾಜ್ಯದ ಯಾವುದೇ ಜನಪ್ರತಿನಿಧಿಗಳಾಗಲಿ, ಕ್ಷೇತ್ರದ ಶಾಸಕರಾಗಲಿ ಸ್ವಾತಿಯ ಮನೆಗೆ ಭೇಟಿ ನೀಡಲಿಲ್ಲ. ಬಡ ಕುಟುಂಬದ ಹೆಣ್ಣು ಮಕ್ಕಳು ಯಾವುದೇ ತಪ್ಪು ಮಾಡದೇ ಲವ್ ಜಿಹಾದ್ ಬಲೆಗೆ ಸಿಲುಕುತ್ತಿದ್ದಾರೆ. ಅಷ್ಟೆ ಅಲ್ಲದೇ ಗೋವಿನ ಕೆಚ್ಚಲು ಕೊಯ್ಯುವ ಕೆಲಸ ರಾಜ್ಯದಲ್ಲಿ ನಡೆಯುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಸವರಾಜ ಗಾಜಿ, ಕುಮಾರ ಮಾರನಬಸರಿ, ಬಸವರಾಜ ಕುರಿ, ವೆಂಕಟೇಶ ಹೂವಣ್ಣನವರ, ಜಯರಾಮ್ ಹುಲಗಣ್ಣನವರ, ರಾಜು ಪೂಜಾರ ಉಪಸ್ಥಿತರಿದ್ದರು.

> ಕೊಲೆಯಾದ ಸ್ವಾತಿ ಮನೆಯಲ್ಲಿನ ಒಬ್ಬರಿಗೆ ಸರ್ಕಾರಿ ಕೆಲಸ ನೀಡಬೇಕು, ಕೊಲೆ ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಬೇಕು, ಸ್ವಾತಿ ಕುಟುಂಬಕ್ಕೆ ರಾಜ್ಯ ಸರ್ಕಾರದಿಂದ 10 ಲಕ್ಷ ರೂ ಪರಿಹಾರ ನೀಡಬೇಕು, ಗುತ್ತಿಗೆಯಲ್ಲಿ ಮುಸಲ್ಮಾನರಿಗೆ ನೀಡಿದ ಮೀಸಲಾತಿ ಹಿಂಪಡೆಯಬೇಕು ಎಂದು ಕೆ.ಈ. ಕಾಂತೇಶ ಆಗ್ರಹಿಸಿದರು.

**ಇಂದು ದ್ವಿತೀಯ ಪಿಯು ಫಲಿತಾಂಶ ಪ್ರಕಟ**

## ವಿದ್ಯಾರ್ಥಿಗಳೇ, ರಿಸಲ್ಟ್ ಏನೇ ಇದ್ರೂ ಪಾಸಿಟಿವ್ ಆಗಿರಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಇಂದು ದ್ವಿತೀಯ ಪಿಯು ಫಲಿತಾಂಶ ಪ್ರಕಟವಾಗಲಿದೆ. ಪರೀಕ್ಷೆ ಬರೆದು ಫಲಿತಾಂಶಕ್ಕೆ ಕಾತುರದಿಂದ ಕಾಯುತ್ತಿರುವ ವಿದ್ಯಾರ್ಥಿಗಳಿಗೆ ಅಂತೂ ಇಂತೂ ಗುಡ್ ನ್ಯೂಸ್ ಸಿಕ್ಕಿದೆ.

ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮಂಗಳವಾರ ಮಧ್ಯಾಹ್ನ 12.30ಕ್ಕೆ ಸುದ್ದಿಗೋಷ್ಠಿ ನಡೆಸಿ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ಬಳಿಕ ಮಧ್ಯಾಹ್ನ 1.30ಕ್ಕೆ ವೆಬ್‌ಸೈಟ್‌ನಲ್ಲಿ ಕಗಅ ಫಲಿತಾಂಶ ಪ್ರಕಟವಾಗಲಿದ್ದು, ವಿದ್ಯಾರ್ಥಿಗಳು ಇದ್ದಲ್ಲೇ ಆನ್ ಲೈನ್ ನಲ್ಲಿ ಫಲಿತಾಂಶ ವೀಕ್ಷಣೆ ಮಾಡಬಹುದಾಗಿದೆ.

ರಿಸಲ್ಟ್ ನೋಡುವುದು ಎಲ್ಲಿ?

karresults.nic.in

.karnataka.gov.in

ಈ ಎರಡು ವೆಬ್‌ಸೈಟ್ ಗಳಲ್ಲಿ ದ್ವಿತೀಯ ಪಿಯುಸಿ ಫಲಿತಾಂಶ ಲಭ್ಯವಿರಲಿದೆ.

ಆನ್ಲೈನ್ ನಲ್ಲಿ ಫಲಿತಾಂಶ ನೋಡುವುದ್ಹೇಗೆ?

ಅಧಿಕೃತ ವೆಬ್‌ಸೈಟ್‌ಗೆ karresults.nic.in ಅಥವಾ kseab.karnataka.gov.in ಗೆ ಭೇಟಿ ನೀಡಬೇಕು.

ಹೋಂ ಪೇಜ್ ನಲ್ಲಿ, ಖಜಛಿಂಟಿಜ ಕಗ ಖಜಣಟಣ 2025 ಲಿಂಕ್ ಕ್ಲಿಕ್ ಮಾಡಬೇಕು.

ರಿಜಿಸ್ಟ್ರೇಷನ್ ನಂಬರ್ (ನೋಂದಣಿ ಸಂಖ್ಯೆ) ಮತ್ತು ಪಾಸ್‌ವರ್ಡ್ ನಮೂದಿಸಬೇಕು.

Second PU Results 2025 ಎಂಬುದು ಸ್ಕ್ರೀನ್ ನಲ್ಲಿ ಕಾಣಿಸುತ್ತದೆ. ನಂತರ ರಿಸಲ್ಟ್ ನೋಡಬಹುದು. ಅಲ್ಲಿಯೇ ಪಿಡಿಎಫ್ ಡೌನ್ಲೋಡ್ ಮಾಡಲು ಅವಕಾಶ ಇರುತ್ತದೆ.

**ಶಿವಯೋಗಿ ಗಾಂಜಿ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಮೋದ ಮುತಾಲಿಕ**

# ಸ್ವರಕ್ಷಣೆಗಾಗಿ ಮಹಿಳೆಯರಿಗೆ ತ್ರಿಶೂಲ ದೀಕ್ಷೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ ಮಹಿಳೆಯರಿಗೆ ಸರಕಾರದಿಂದ ಅಥವಾ ಪೊಲೀಸರಿಂದ ರಕ್ಷಣೆಯಿಲ್ಲ. ಅವರು ತಮ್ಮ ಸ್ವಯಂ ರಕ್ಷಣೆಗೆ ತ್ರಿಶೂಲ ಇಟ್ಟುಕೊಂಡಿರಬೇಕು. ಈ ತ್ರಿಶೂಲವನ್ನು ಮಹಿಳೆಯರು ವ್ಯಾನಿಟಿ ಬ್ಯಾಗ್‌ನಲ್ಲಿ ಇಟ್ಟುಕೊಂಡು ಓಡಾಡಬೇಕು. ಸಮಸ್ಯೆ ಮಾಡುವವರಿಂದ ರಕ್ಷಣೆ ಮಾಡಿಕೊಳ್ಳಬೇಕು ಎನ್ನುವ ಉದ್ದೇಶದಿಂದ ಮಹಿಳೆಯರಿಗೆ ತ್ರಿಶೂಲ ದೀಕ್ಷೆ ನೀಡುತ್ತಿದ್ದೇವೆ ಎಂದು ಹೇಳಿರುವದಾಗಿ ಶ್ರೀರಾಮ ಸೇನಾ ಸಂಸ್ಥಾಪಕ ಪ್ರಮೋದ ಮುತಾಲಿಕ ತ್ರಿಶೂಲ ದೀಕ್ಷೆ ಹೇಳಿಕೆಯನ್ನು ಸಮರ್ಥಿಸಿಕೊಂಡರು.

ಅವರು ಲಕ್ಷೇಶ್ವರ ಶ್ರೀರಾಮ ಸೇನಾ ಕಾರ್ಯಕರ್ತರ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದ ಸಂದರ್ಭದಲ್ಲಿ ಶಿವಯೋಗಿ ಗಾಂಜಿ ಅವರ ನಿವಾಸದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಅತ್ಯಾಚಾರಿಗಳು ಮತ್ತು ಮಹಿಳೆಯರಿಗೆ ಹಾನಿ ಮಾಡಲು ಅಥವಾ ಶೋಷಿಸಲು ಪ್ರಯತ್ನಿಸುವವರ ವಿರುದ್ಧ ತಮ್ಮನ್ನು ತಾವು ರಕ್ಷಿಸಿಕೊಳ್ಳಲು, ಮಹಿಳೆಯರು ಧೈರ್ಯವನ್ನು ಬೆಳೆಸಿಕೊಳ್ಳಬೇಕು. ತ್ರಿಶೂಲ ದೀಕ್ಷೆಯು ಧೈರ್ಯ, ಶೌರ್ಯ ಮತ್ತು ಜೀವನದಲ್ಲಿ ಪ್ರತಿಕೂಲಗಳ ವಿರುದ್ಧ ಹೋರಾಡುವ ಮನೋಭಾವವನ್ನು ತುಂಬುತ್ತದೆ ಎಂದು ಹೇಳಿದರು.

1995ರ ವಕ್ಫ್ ಕಾಯ್ದೆ ತಿದ್ದುಪಡಿ ಮಸೂದೆಗೆ ಲೋಕಸಭೆಯಲ್ಲಿ ಅಂಗೀಕಾರ ದೊರೆತಿರುವುದನ್ನು ಸ್ವಾಗತಿಸುವದಾಗಿ ಹೇಳಿದ ಮುತಾಲಿಕ, ಇದೊಂದು ಐತಿಹಾಸಿಕ ಕ್ಷಣ ಎಂದು ಬಣ್ಣಿಸಿದರು. 50 ವರ್ಷಗಳಿಂದ ವಕ್ಫ್ ಮಂಡಳಿಯು ಸರ್ಕಾರಿ ಭೂಮಿ ಮತ್ತು ದೇವಾಲಯಗಳು, ಮಠಗಳು ಮತ್ತು ಇತರ ಧಾರ್ಮಿಕ ಸಂಸ್ಥೆಗಳ ಲಕ್ಷಾಂತರ ಎಕರೆ ಭೂಮಿಗಳನ್ನು, ಆಸ್ತಿಗಳನ್ನು ಲೂಟಿ ಮಾಡುತ್ತಿದೆ. ಇದು ಪರೋಕ್ಷವಾಗಿ ಕಾಂಗ್ರೆಸ್ ಬೆಂಬಲದಿಂದ ನಡೆಯುತ್ತಿದ್ದು, ಕಾಂಗ್ರೆಸ್‌ನವರಿಗೆ ಹಿಂದೂಗಳ ಮೇಲೆ ಎಂದಿಗೂ ಪ್ರೀತಿ ಬರಲು ಸಾಧ್ಯವಿಲ್ಲ. ಕಾಂಗ್ರೆಸ್‌ನವರು ನಿಜವಾದ ರಾಷ್ಟ್ರದ್ರೋಹಿಗಳಾಗಿದ್ದಾರೆ ಎಂದರು.



ಯತ್ನಾಳ ಅವರನ್ನು ಬಿಜೆಪಿ ಉಚ್ಚಾಟನೆ ಮಾಡಿರುವ ಕುರಿತು ಪ್ರತಿಕ್ರಿಯಿಸಿದ ಮುತಾಲಿಕ, ಆ ವಿಚಾರ ಅವರ ಪಕ್ಷದ ಆಂತರಿಕ ಸಮಸ್ಯೆ. ಕೇಂದ್ರ ವರಿಷ್ಠರು ಮಾಡಿರುವ ನಿರ್ಧಾರವಾಗಿದೆ. ಆದರೆ ಅವರನ್ನು ಮತ್ತೆ ಪಕ್ಷಕ್ಕೆ ಸೇರಿಸಿಕೊಳ್ಳಬೇಕು ಎನ್ನುವದು ನಮ್ಮ ಹೇಳಿಕೆಯಾಗಿದೆ. ಇಲ್ಲದಿದ್ದಲ್ಲಿ ಪಕ್ಷದ ಮೇಲೆ ಸಮಸ್ಯೆಯಾಗಬಹುದು ಎಂದು ಹೇಳಿದರು.

> ರಾಜ್ಯದಲ್ಲಿ, ದೇಶದಲ್ಲಿ, ಬಡವರು ಊಟಕ್ಕಿಲ್ಲದೆ ಪರಿತಪಿಸುತ್ತಿದ್ದಾರೆ. ಆದರೆ ಸಂಸದರು, ಶಾಸಕರು ತಮ್ಮ ಸಂಬಳವನ್ನು ಡಬಲ್ ಮಾಡಿಕೊಂಡಿದ್ದಾರೆ. ಇದಕ್ಕೆ ಯಾವುದೇ ಪಕ್ಷಗಳು ವಿರೋಧಿಸಲಿಲ್ಲ. ರಾಷ್ಟ್ರಪತಿಗಳು, ರಾಜ್ಯಪಾಲರು ಸಹ ಅಂಕಿತ ಹಾಕಿದರು. ಇದಕ್ಕೆ ಶ್ರೀರಾಮ ಸೇನೆಯಿಂದ ಧಿಕ್ಕಾರ ಹೇಳುತ್ತೇನೆ. ದೇಶದಲ್ಲಿರುವ ಯಾವ ಸಂಸದರು, ಶಾಸಕರು ಊಟಕ್ಕೆ ಗತಿಯಿಲ್ಲದಿರುವಷ್ಟು ಬಡವರಿದ್ದಾರೆ ಎಂದು ಪ್ರಶ್ನಿಸಿದ ಮುತಾಲಿಕ, ಈ ಸಂಬಳ ಹೆಚ್ಚಳಕ್ಕೆ ಪಕ್ಷಾತೀತ ಬೆಂಬಲ ನೀಡುತ್ತಿರುವದು ಎಲ್ಲ ಪಕ್ಷಗಳ ನಿರ್ಲಜ್ಜೆಯ ನಡೆಯಾಗಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಆಡಳಿತ ಮಾಡುತ್ತಿರುವ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದ್ದು, ಹಿಂದೂ ಕಾರ್ಯಕರ್ತರಿಗೆ, ಬಿಜೆಪಿ ಕಾರ್ಯಕರ್ತರಿಗೆ ರಕ್ಷಣೆ ಇಲ್ಲದಂತಾಗಿದೆ. ಹಿಂದೂಗಳ ವಿರುದ್ಧ ಹೋರಾಡುವವರು ಗೂಂಡಾಗಳೇ ಎಂದು ಪ್ರಶ್ನಿಸಿದ ಅವರು, ಪೊಲೀಸ್ ಇಲಾಖೆ ಸರಕಾರದ ನಿರ್ದೇಶನದಂತೆ ನಡೆಯುತ್ತದೆ. ಇದರಿಂದ ಪೊಲೀಸರಿಂದಲೂ ರಕ್ಷಣೆ ಇಲ್ಲದಂತಾಗಿದೆ. ರಾಜ್ಯದಲ್ಲಿ ಭ್ರಷ್ಟ ಸರಕಾರ ಆಡಳಿತ ನಡೆಸುತ್ತಿದೆ ಎಂದು ಟೀಕಿಸಿದರಲ್ಲದೆ, ಗುತ್ತಿಗೆದಾರರು, ಉಪನ್ಯಾಸಕರು ಸಂಬಳವಿಲ್ಲದೆ ಒದ್ದಾಡುತ್ತಿದ್ದಾರೆ. ಆದರೆ ಇದು ಸರಕಾರಕ್ಕೆ ಲೆಕ್ಕಕ್ಕಿಲ್ಲವೇ ಎಂದು ಪ್ರಶ್ನಿಸಿದರು.

ಶ್ರೀ ರಾಮ ಸೇನೆಯ ರಾಜ್ಯ ಸಂಚಾಲಕ ರಾಜೂ ಖಾನಪ್ಪನವರ ಇದ್ದರು.

## ಮಳೆ ಅವಾಂತರ: ಬೇರು ಸಮೇತ ಕಿತ್ತು ಬಂದ ಮರ, ತಪ್ಪಿದ ಅನಾಹುತ!



■ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಾರ ಜಿಲ್ಲೆಯಲ್ಲಿ ಸುರಿದ ಭಾರೀ ಮಳೆಗೆ ಮರವೊಂದು ಬೇರು ಸಮೇತ ವಿದ್ಯುತ್ ತಂತಿಯ ಮೇಲೆ ಉರುಳಿ ಬಿದ್ದಿರುವ ಘಟನೆ ಬೆಟಗೇರಿಯ ಶಿವಾಜಿ ನಗರದಲ್ಲಿ ಜರುಗಿದೆ.

ಘಟನೆ ನಡೆದು ಗಂಟೆಗಳೇ ಕಳೆದರೂ ಗದಗ-ಬೆಟಗೇರಿ ನಗರಸಭೆ ಅಧಿಕಾರಿಗಳು, ಹೆಸ್ಕಾಂ ಸಿಬ್ಬಂದಿ ಸ್ಥಳಕ್ಕೆ ಬಾರದೇ ಇರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಯಿತು. ಇನ್ನೂ ಮರ ವಿದ್ಯುತ್ ತಂತಿಯ ಮೇಲೆ ಬಿದ್ದ ಪರಿಣಾಮ ವಿದ್ಯುತ್ ಸಂಪರ್ಕ ಕಡಿಗೊಂಡಿತು.

ಜಿಲ್ಲೆಯ ಹಲವಡೆ ಗಾಳಿ ಸಮೇತ ಮಳೆಯಾಗಿದ್ದು, ಭಾರೀ ಮಳೆಯಿಂದ ಜನತೆ ಹಾಗೂ ವಾಹನ ಸವಾರರು ಪರದಾಡಿದರು. ಮತ್ತೊಂದೆಡೆ ಬೇಸಿಗೆ ಬಿಸಿಲ ಬೇಗೆಗೆ ಮಳೆರಾಯ ತಂಪೆರೆದಿದೆ.

# ಶ್ರೀರಾಮ ಸೇನಾ ಕಾರ್ಯಕರ್ತರಿಂದ ಪಥಸಂಚಲನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀರಾಮ ಸೇನಾ ಲಕ್ಷ್ಮೇಶ್ವರ ತಾಲೂಕು ಘಟಕದಿಂದ ಶ್ರೀರಾಮ ನವಮಿ ಪ್ರಯುಕ್ತ ಕಾರ್ಯಕರ್ತರು ಭಾನುವಾರ ಲಕ್ಷ್ಮೇಶ್ವರದಲ್ಲಿ ಆಕರ್ಷಕ ಪಥಸಂಚಲನ ನಡೆಸಿದರು.

ಶ್ರೀರಾಮ ಸೇನಾ ಸಂಘಟನೆ ಸ್ಥಾಪನೆಯಾಗಿ 20 ವರ್ಷ, ಶ್ರೀರಾಮ ಸೇನಾ ಸಂಸ್ಥಾಪಕ ಹಾಗೂ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ ಮುತಾಲಿಕರ 70ನೇ ವರ್ಷದ ಜನ್ಮದಿನದ ನಿಮಿತ್ತ 200ಕ್ಕೂ ಹೆಚ್ಚು ಶ್ರೀರಾಮ ಸೇನಾ ಕಾರ್ಯಕರ್ತರು ಗಣವೇಷದೊಂದಿಗೆ ಆಕರ್ಷಕ ಪಥಸಂಚಲನ ನಡೆಸಿದರು.

ಪಥಸಂಚಲನ ರಂಭಾಪುರಿ ಕಲ್ಯಾಣ ಮಂಟಪದಿಂದ ಪ್ರಾರಂಭಗೊಂಡು ಪಂಪ ವೃತ್ತ, ಬಸ್ತಿಕೇರಿ, ವಿದ್ಯಾರಣ್ಯ ವೃತ್ತ, ಹಾವಳಿ ಆಂಜನೇಯ ದೇವಸ್ಥಾನ, ಕಾಳಮ್ಮದೇವಿ ದೇವಾಸ್ಥಾನ, ಕೋರ್ಟ್ ಸರ್ಕಲ್, ಹಳ್ಳದಕೇರಿ, ತಹಸೀಲ್ದಾರ ಕಚೇರಿ, ಭರಮದೇವರ ಸರ್ಕಲ್, ಪಾದಗಟ್ಟಿ, ಸರಕಾರಿ ಆಸ್ಪತ್ರೆ, ಹಳೇ ಬಸ್ ಸ್ಟ್ಯಾಂಡ್, ಕಿತ್ತೂರರಾಣಿ ಚನ್ನಮ್ಮ ವೃತ್ತದ ಮೂಲಕ ಸಾಗಿ ಪಿಎಸ್‌ಬಿಡಿ ಗರ್ಲ್ಸ್ ಹೈಸ್ಕೂಲ್/ತೋಟದ್ದೇವರಮಠದ ಬಳಿ ಸಂಪನ್ನಗೊಂಡಿತು.



ಪಥಸಂಚಲನ ಸಾಗುವ ಮಾರ್ಗದುದ್ದಕ್ಕೂ ಮಹಿಳೆಯರು, ಮಕ್ಕಳು ತಮ್ಮ ಮನೆಗಳ ಮುಂದೆ ರಂಗೋಲಿ ಬಿಡಿಸಿ ಹೂಗಳಿಂದ ಅಲಂಕರಿಸಿದ್ದರು. ರಸ್ತೆಯ ಇಕ್ಕೆಲಗಳಲ್ಲಿ ತಳಿರು ತೋರಣ, ಕೇಸರಿ ಧ್ವಜ ಕಟ್ಟಿ ವಿನಮ್ರವಾಗಿ ಸ್ವಯಂ ಸೇವಕರನ್ನು ಸ್ವಾಗತಿಸಿದರು.

ಶಾಂತಿಯುತ ಪಥಸಂಚಲನಕ್ಕಾಗಿ ಎಸ್‌ಪಿ ನೇತೃತ್ವದಲ್ಲಿ ಮುಂಜಾಗೃತಾ ಕ್ರಮ ಕೈಗೊಳ್ಳಲಾಗಿತ್ತು.

ಮೂವರು ಡಿವೈಎಸ್‌ಪಿ, 7 ಸಿಪಿಐ, 16 ಪಿಎಸ್‌ಐ, 15 ಎಎಸ್‌ಐ, 72 ಪೊಲೀಸ್ ಸಿಬ್ಬಂದಿಗಳು, 55 ಹೋಮ್‌ಗಾರ್ಡ್ಸ್, ಕೆಎಸ್‌ಆರ್‌ಪಿ, ಡಿಆರ್ ಸಿಬ್ಬಂದಿಗಳು ಇದ್ದರು.

# ಆಸ್ತಿ ತೆರಿಗೆ ಈಗ ಇನ್ನಷ್ಟು ಸುಲಭ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾರ್ವಜನಿಕರು ತಮ್ಮ ಆಸ್ತಿ ತೆರಿಗೆ, ನೀರಿನ ಕರ, ಯುಜಿಡಿ ಕರ ಸೇರಿದಂತೆ ಇತರೆ ಎಲ್ಲ ಕರಗಳನ್ನು ಇನ್ನು ಮುಂದೆ ಕರ್ನಾಟಕ ಒನ್ ಕೇಂದ್ರಗಳಲ್ಲಿ ಪಾವತಿಸಬಹುದಾಗಿದೆ. ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಹೇಳಿದರು.ಪಟ್ಟಣ ಪಂಚಾಯಿತಿ ಆವರಣದಲ್ಲಿ ವಿದ್ಯುನ್ಮಾನ ನಾಗರಿಕರ ಸೇವಾ ವಿತರಣೆ ನಿರ್ದೇಶನಾಲಯ (ಇಡಿಸಿಎಸ್) ಹಾಗೂ ಪಟ್ಟಣ ಪಂಚಾಯಿತಿ ವತಿಯಿಂದ ಕರ್ನಾಟಕ ಒನ್ ಕೇಂದ್ರಗಳಲ್ಲಿ ತೆರಿಗೆ ಪಾವತಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು. ತೆ-ರಿಗೆ ಪಾವತಿ ಸರಳೀಕರಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು ವಿದ್ಯುನ್ಮಾನ ನಾಗರಿಕರ ಸೇವಾ ವಿತರಣೆ ನಿರ್ದೇಶನಾಲಯ (ಇಡಿಸಿಎಸ್)ದ ಮೂಲಕ ರಾಜ್ಯದ ಎಲ್ಲ ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಕೇಂದ್ರಗಳಲ್ಲಿ ಆಸ್ತಿ ತೆರಿಗೆಯನ್ನು ಪಾವತಿಸಲು ಬಿಬಿಪಿಎಸ್ (ಭಾರತ ಬಿಲ್ ಪೇ ಸಿಸ್ಟಮ್) ವ್ಯವಸ್ಥೆಯನ್ನು ಜಾರಿ ಮಾಡಿದೆ. ಆ ಮೂಲಕ ಸ್ಥಳೀಯ ಸಂಸ್ಥೆಗಳ ತೆರಿಗೆಯನ್ನು ಕರ್ನಾಟಕ ಒನ್ ಕೇಂದ್ರಗಳಲ್ಲಿ ಪಾವತಿಸಬಹುದಾಗಿದೆ. ಇದರ ಸದುಪಯೋಗವನ್ನು ಪಡೆದುಕೊಂಡು ಸಾರ್ವಜನಿಕರು ಸಕಾಲಕ್ಕೆ ತೆರಿಗೆ ಪಾವತಿಗೆ ಮುಂದಾಗಬೇಕು ಎಂದರು.




ಪ.ಪಂ ಅಧ್ಯಕ್ಷ ಪಕ್ಕೀರಪ್ಪ ಮಳ್ಳಿ, ಸಿಬ್ಬಂದಿ ರಮೇಶ ಹಲಗಿಯವರ, ಶಂಕ್ರಪ್ಪ ದೊಡ್ಡಣ್ಣವರ, ಆರೀಫ್ ಮಿರ್ಜಾ ಸೇರಿದಂತೆ ಇತರರಿದ್ದರು.

# ರಾಮರಾಜ್ಯದ ಕನಸು ನನಸಾಗಬೇಕು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಮ ರಾಜ್ಯದ ಕನಸು ನನಸಾದಾಗ ಮಾತ್ರ ಶ್ರೀರಾಮ ನವಮಿಗೊಂದು ಅರ್ಥ ಬರುತ್ತದೆ. ಶ್ರೀರಾಮನ ಗುಣಗಳನ್ನು ಮತ್ತು ಅವನ ಆಡಳಿತದ ರೀತಿ-ನೀತಿಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಶ್ರೀರಾಮ ನವಮಿ ಆಚರಣೆ ಅರ್ಥಪೂರ್ಣವಾಗುತ್ತದೆ ಎಂದು ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ರಾಮಮಂದಿರದಲ್ಲಿ ಆಚರಿಸಲಾದ ಶ್ರೀರಾಮ ನವಮಿ ಉತ್ಸವದಲ್ಲಿ ಅವರು ಮಾತನಾಡಿದರು.



ಶ್ರೀರಾಮ ನಮಗೆಲ್ಲರಿಗೂ ಆದರ್ಶ ಪುರುಷನಾಗಿದ್ದಾನೆ. ಅವನ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ. ಮಾತು ಕೇಳದ ಮಕ್ಕಳಿರುವ ಈ ಕಾಲದಲ್ಲಿ ತಂದೆಯ ಒಂದು ಮಾತಿಗೆ ಹದಿನಾಲ್ಕು ವರ್ಷ ಕಾಡಿಗೆ ಹೋದ ಶ್ರೀರಾಮನ ಕಥೆಯನ್ನು ಇಂದಿನ ಮಕ್ಕಳಿಗೆ ತಿಳಿಸಬೇಕಿದೆ. ಶ್ರೀ ರಾಮನ ಒಂದೊಂದು ಗುಣವೂ ಒಂದೊಂದು ಆದರ್ಶವಾಗಿದ್ದು, ಇದನ್ನು ಪಾಲಿಸುವಂತೆ ನಮ್ಮ ಮಕ್ಕಳು ಮತ್ತು ಯುವಕರಿಗೆ ಮನವರಿಕೆ ಮಾಡಿಕೊಡಬೇಕಾದ ಅನಿವಾರ್ಯತೆಯಿದೆ ಎಂದು ಹೇಳಿದರು.ಸುಮಂಗಲೆಯರು ಶ್ರೀರಾಮನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿದರು.

ಈ ಸಂದರ್ಭದಲ್ಲಿ ವಿಶ್ವನಾಥ ಗ್ರಾಮಪುರೋಹಿತ, ಮಂಜುನಾಥ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ಮುಕುಂದಭಟ್ಟ ಸೂರಭಟ್ಟನವರ, ರಾಮಣ್ಣ ನವಲಿ, ರಾಮಕೃಷ್ಣ ಸದರಜೋಷಿ, ಶೋಭಾ ಕುಲಕರ್ಣಿ, ಪದ್ಮಾ ಕುಲಕರ್ಣಿ, ವೀಣಾ ಕುಲಕರ್ಣಿ, ಪರಿಮಳಾ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಸನ್ಮತಿ ಸದರಜೋಷಿ, ಸೀಮಾ ಕೊಂಡಿ, ರಶ್ಮಿ ಕುಲಕರ್ಣಿ, ರೂಪಾ ಗ್ರಾಮಪುರೋಹಿತ, ಸಂಧ್ಯಾ ಕುಲಕರ್ಣಿ, ಪ್ರತೀಕ್ಷಾ ಕುಲಕರ್ಣಿ, ಶೋಭಾ ಸೂರಭಟ್ಟನವರ, ಉಮಾಬಾಯಿ ಕೊಳ್ಳಿ ಇನ್ನೂ ಮುಂತಾದವರಿದ್ದರು. ಸಂಜೀವ ಕುಲಕರ್ಣಿ ಮತ್ತು ಗುರುರಾಜ ಕುಲಕರ್ಣಿ ಶ್ರೀರಾಮನಿಗೆ ಅಭಿಷೇಕ ಸೇವೆ ನೆರವೇರಿಸಿದರು.

# ಪೇಶ್ ಇಮಾಮ್, ಮೊಹಜನ್‌ಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಅಂಜುಮನ್ ಶಾದಿ ಹಾಲ್‌ನಲ್ಲಿ ಖಿದ್ಮತ್-ಏ-ಮಿಲ್ಲತ್ ಗ್ರೂಪ್ ವತಿಯಿಂದ ಮುಳಗುಂದದ 10ಮಸೀದಿಗಳ ಪೇಶ್ ಇಮಾಮ್ ಮತ್ತು ಮೊಹಜನಗಳಿಗೆ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಅಂಜುಮನ್ ಸಂಸ್ಥೆ ಅಧ್ಯಕ್ಷರಾದ ತಾಜುದ್ದೀನ ಕಿಂಡ್ರಿ ಮಾತನಾಡಿ, ನಮ್ಮ ಸಮುದಾಯದ ಪವಿತ್ರ ಮಾಸವಾದ ರಂಜಾನ ತಿಂಗಳಲ್ಲಿ ಪೇಶ್ ಇಮಾಮ್ ಮತ್ತು ಮೊಹಜನ್ ರೋಜಾ ಮಾಡುವುದರ ಜೊತೆಗೆ 30 ದಿನಗಳ ಕಾಲ ತರಾವೀ ನಮಾಜ್ ಮಾಡುತ್ತ ಸರ್ವರ ಒಳಿತಿಗಾಗಿ ಪ್ರಾರ್ಥನೆ, ಮಾರ್ಗದರ್ಶನ ಮಾಡುವ ಗುರುಗಳನ್ನು ಸನ್ಮಾನ ಮಾಡುವುದು ನಮ್ಮ ಪುಣ್ಯ ಎಂದರು.

ಈ ಸಂದರ್ಭದಲ್ಲಿ ಎ.ಡಿ ಮುಜಾವರ್, ರಾಜೇಸಾಬ ಸೈಯದ್ ಬಡೆ, ಹೈದರ್ ಖವಾಸ, ದಾವಲಸಾಬ ಲಕ್ಷೇಶ್ವರ, ಚಮನಸಾಬ ಹಾದಿಮನಿ, ಮುನ್ನಾ ಡಾಲಾಯತ, ಹುಳ್ಳಿ ಸರ್, ದಾವೂದ್ ಜಮಾಲ್, ಮಾಬುಲಿ ದುರ್ಗಿಗುಡಿ, ಖಲಂದರ್ ಗಾಡಿ, ಹುಸೇನ ಅಕ್ಕಿ, ರಿಯಾಜ್ ಮುಲ್ಲಾ, ಆರೀಫ್ ಕಿಂಡ್ರಿ, ಇಸಾಕ್ ಹೊಸಮನಿ, ದಾವಲಸಾಬ ಕುರ್ತಕೋಟಿ, ದಾವಲ ಲಾಡಸಾಬನವರ, ಮಹಮ್ಮದ್ ಶಫಿ ಸಿದ್ದಿ ಹಾಗೂ ವಿವಿಧ ಮಸೀದಿಗಳ ಅಧ್ಯಕ್ಷರು ಹಾಗೂ ಸದಸ್ಯರು ಹಾಜರಿದ್ದರು.

# ಕೆಲಸ ಅರಸಿ ಗುಳೇ ಹೋಗಬೇಡಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬೇಸಿಗೆ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳ ಕೂಲಿಕಾರರು ದುಡಿಮೆ ಅರಸಿ ಬೇರೆ ಕಡೆಗೆ ಹೋಗಬೇಡಿ. ನಿಮ್ಮ ಊರಲ್ಲೇ ಗ್ರಾಮ ಪಂಚಾಯಿತಿ ವತಿಯಿಂದ ನರೇಗಾ ಯೋಜನೆಯಡಿ ನಿಮಗೆ ಕೆಲಸ ಸಿಗಲಿದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿ ತಾಲೂಕಿನ ಮಜ್ಜೂರ ಗ್ರಾ.ಪಂ ವ್ಯಾಪ್ತಿಯಲ್ಲಿ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದರು.

ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ನರೇಗಾ ಯೋಜನೆಯಡಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಎಪ್ರಿಲ್ 1ರಿಂದ ಕೂಲಿ ಮೊತ್ತವನ್ನು ರೂ. 349ರಿಂದ 370ಕ್ಕೆ ಹೆಚ್ಚಿಸಲಾಗಿದೆ. ನರೇಗಾ ನಿಯಮಾನುಸಾರ ನಿಗದಿತ ಸಮಯದಲ್ಲಿ ಕೂಲಿ ಮೊತ್ತ ನಿಮ್ಮ ಬ್ಯಾಂಕ್ ಖಾತೆಗೆ ಹಣ ಜಮಾ ಆಗಲಿದೆ. ಅಳತೆಗನುಸಾರವಾಗಿ ಕೆಲಸ ನಿರ್ವಹಿಸಿ ಪೂರ್ಣ ಪ್ರಮಾಣದ ಕೂಲಿಯನ್ನು ಪಡೆಯಬೇಕು. ಕೆಲಸ ನಡೆಯುವ ಸ್ಥಳಗಳಲ್ಲಿ ಹಾಜರಿರುವವರಿಗೆ ಮಾತ್ರ ಹಾಜರಿ ಹಾಕಬೇಕು. ಈ ಬಗ್ಗೆ ಸಂಬಂಧಿಸಿದ ಪಿಡಿಓಗಳು ಪರಿಶೀಲನೆ ನಡೆಸಬೇಕೆಂದು ತಿಳಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಪಿಡಿಓ, ತಾಂತ್ರಿಕ ಸಹಾಯಕರು, ನರೇಗಾ ಸಿಬ್ಬಂದಿಗಳು ಸೇರಿದಂತೆ ಕೂಲಿಕಾರರು ಹಾಜರಿದ್ದರು.

**ಗದಗ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಕೆ.ಎಚ್. ಪಾಟೀಲ ನಾಮಕರಣಕ್ಕೆ ವಿರೋಧ**

# ಬಿಜೆಪಿಯಿಂದ ಪತ್ರ ಚಳುವಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವೈದ್ಯಕೀಯ ಮಹಾವಿದ್ಯಾಲಯಕ್ಕೆ ದಿ. ಕೆ.ಎಚ್. ಪಾಟೀಲರ ಹೆಸರು ನಾಮಕರಣ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದ್ದನ್ನು ವಿರೋಧಿಸಿ ಗದಗ ನಗರ ಬಿಜೆಪಿ ವತಿಯಿಂದ ರಾಜ್ಯಪಾಲರಿಗೆ ಪತ್ರ ಬರೆಯುವ 'ಪತ್ರ ಚಳುವಳಿ'ಯನ್ನು ಪ್ರಾರಂಭಿಸಿದರು.

ನಗರದಲ್ಲಿ ಈಗಾಗಲೇ ಜಿಲ್ಲಾ ಕ್ರೀಡಾಂಗಣಕ್ಕೆ, ರೈತ ಭವನಕ್ಕೆ, ರಸ್ತೆಗಳಿಗೆ, ಬಡಾವಣೆಗಳಿಗೆ, ಸರ್ಕಲ್‌ಗಳಿಗೆ ದಿ, ಕೆ.ಎಚ್. ಪಾಟೀಲರ ಹೆಸರನ್ನು ಇಡಲಾಗಿದೆ. ಇದೀಗ ಪುನಃ ಗದಗ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಕೆ.ಎಚ್. ಪಾಟೀಲರ ಹೆಸರನ್ನು ಇಡಲು ತೀರ್ಮಾನಿಸಿದ್ದನ್ನು ವಿರೋಧಿಸಿ ಗದಗ ಬಿಜೆಪಿ ವತಿಯಿಂದ ರಾಜ್ಯಪಾಲರಿಗೆ ಪತ್ರ ಬರೆದು ಈ ಮಹಾವಿದ್ಯಾಲಯಕ್ಕೆ ಕೆ.ಎಚ್. ಪಾಟೀಲರ ಹೆಸರಿನ ಬದಲಾಗಿ ಪಂ. ಪುಟ್ಟರಾಜ ಗವಾಯಿಗಳ ಅಥವಾ ಬೇರೆ ಯಾವುದೇ ಪ್ರಮುಖ ವ್ಯಕ್ತಿಗಳ ಹೆಸರನ್ನು ಇಡಬೇಕೆಂದು ಒತ್ತಾಯಿಸಲಾಯಿತು.



ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ನಗರ ಘಟಕದ ಅಧ್ಯಕ್ಷ ಸುರೇಶ ಮರಳಪ್ಪನವರ, ಗಂಗಾಧರ ಮೇಲಗಿರಿ, ಸಿದ್ಲಿಂಗಪ್ಪ ಅರಳಿ, ಬಸವರಾಜ ಹಡಪದ, ಸುರೇಶ ಗುಂಜಾಳ, ಶಂಕರ ನೀರಲಕೇರಿ, ಬಸವರಾಜ ಮಡೀವಾಳರ, ಪಂಚಾಕ್ಷರಿ ಅಂಗಡಿ, ಸುರೇಶ ಮಾಳವಾಡ, ಆದರ್ಶ ಬಳಗಾನೂರ, ಸುರೇಶ ಹೆಬಸೂರ, ವಿಶ್ವನಾಥ ಸಫಾರೆ, ಶ್ರೀಕಾಂತ ಕಟವಟೆ, ಮಂಜುನಾಥ ಕಾಟಗಿ, ಮುತ್ತು ಜಾಲಗಾರ ಮುಂತಾದವರು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ಕಾರ್ಯಾಗಾರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯಡಿ ಕನ್ನಡ ಮತ್ತು ಇಂಗ್ಲಿಷ್ ವಿಷಯದ ಕುರಿತು ರಾಜ್ಯ ಮಟ್ಟದ ಕಾರ್ಯಾಗಾರ ಎಪ್ರಿಲ್ 8ರಂದು ಮುಂಜಾನೆ 10 ಗಂಟೆಗೆ ಜರುಗಲಿದೆ. ಕನ್ನಡ ವಿಭಾಗದಿಂದ ಚಂಪು ಸಾಹಿತ್ಯ ಕಾವ್ಯಗಳ ಓದು ಮತ್ತು ವಿಶ್ಲೇಷಣೆ, ಇಂಗ್ಲಿಷ್ ವಿಭಾಗದಿಂದ ನವೋದಯ ಸಾಹಿತ್ಯದ ಮೇಲೆ ಇಂಗ್ಲಿಷ್ ಸಾಹಿತ್ಯದ ಪ್ರಭಾವ ಈ ವಿಷಯಗಳ ಕುರಿತು ನಡೆಯಲಿರುವ ಕಾರ್ಯಾಗಾರವನ್ನು ಧಾರವಾಡ ಜಂಟಿ ನಿರ್ದೇಶಕ ಪ್ರೊ. ಪ್ರಕಾಶ ಹೊಸಮನಿ ಉದ್ಘಾಟಿಸುವರು. ಸಿಡಿಸಿ ಅಧ್ಯಕ್ಷ ವಿದ್ಯಾದರ ದೊಡ್ಡಮನಿ, ಹುಲಕೋಟಿಯ ಜಿಎಫ್‌ಜಿಸಿ ಪ್ರಾಚಾರ್ಯರಾದ ಡಾ. ಸುಧಾ ಕೌಜಗೇರಿ, ಸಿರ್ಸಿಯ ಅಸೋಸಿಯಟ್ ಪ್ರೊ. ವಿಜಯಲಕ್ಷ್ಮೀ ದಾನರಡ್ಡಿ, ಪ್ರಾ. ಎಮ್.ಯು. ಹಿರೇಮಠ, ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ. ಎಸ್.ಯು. ಸಜ್ಜನಶೆಟ್ಟರ್, ಐಕ್ಯೂಎಸಿ ಕೋಆರ್ಡಿನೇಟರ್ ಮಹಬೂಬಆರೀಫ್ ಸದರಸೋಪೇವಾಲೆ, ಡಾ. ರೂಪಾ ಶ್ರೀನಿವಾಸ, ಪ್ರೊ. ಸತೀಶ್ ಸರ್ವಿ, ಡಾ. ಸುಜಾತಾ ಬರದೂರ, ಪ್ರೊ. ಸುಮಿತ್ರಾ ಮೇದಾರ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಬೆಲೆ ಏರಿಕೆ ನಡುವೆ ಜನತೆಗೆ ಮತ್ತೊಂದು ಶಾಕ್:

## LPG ಸಿಲಿಂಡರ್ ಬೆಲೆ 50 ರೂ. ಹೆಚ್ಚಳ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ಬೆಲೆ 50 ರೂ. ಹೆಚ್ಚಿಸುವುದಾಗಿ ಕೇಂದ್ರ ಸರ್ಕಾರ ಘೋಷಣೆ ಮಾಡಿದೆ. ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕ 2 ರೂ. ಏರಿಕೆ ಬಳಿಕ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಈ ಕುರಿತು ಅಧಿಕೃತ ಘೋಷಣೆ ಹೊರಡಿಸಿದ್ದಾರೆ.

### ಉಚಿತ ಯೋಗ ತರಬೇತಿ ಶಿಬಿರದ ಪ್ರಾರಂಭೋತ್ಸವದಲ್ಲಿ – ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಯೋಗ, ಆಧ್ಯಾತ್ಮ ವಿಶ್ವಶಾಂತಿಗೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವದಲ್ಲೀಗ ಭಿನ್ನ ಭೇದಗಳ ಕಾರಣದಿಂದ ಅಶಾಂತಿ ರಾರಾಜಿಸುತ್ತಿದೆ. ಎಲ್ಲರೂ ಒಂದಿಲ್ಲೊಂದು ಭಯದಿಂದಲೇ ಜೀವನ ನಡೆಸುತ್ತಿದ್ದಾರೆ. ವಿಶ್ವದ ಭಿನ್ನತೆ, ಅನೇಕತೆಗಳನ್ನು ಸಮರಸಗೊಳಿಸಬೇಕಾಗಿದೆ. ಈ ಕಾರ್ಯ ಯೋಗ ಮತ್ತು ಆಧ್ಯಾತ್ಮಗಳಿಂದ ಮಾತ್ರ ಸಾಧ್ಯ. ಯೋಗ ಸಾಧನೆಯಿಂದ ಮಾನವ ದೈಹಿಕ, ಮಾನಸಿಕವಾಗಿ ಆರೋಗ್ಯವಂತನಾಗಿರಲು ಸಾಧ್ಯ. ದೈಹಿಕ, ಮಾನಸಿಕ ಆರೋಗ್ಯದಿಂದ ಸದೃಢನಾದ ವ್ಯಕ್ತಿಯ ಮನಸ್ಸು, ಬುದ್ಧಿ, ಭಾವ, ಭಾವನೆಗಳು ಪರಿಶುದ್ಧವಾಗಿರುವವು ಎಂದು ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ ಮತ್ತು ಎಸ್. ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಸಹಯೋಗದಲ್ಲಿ ಶ್ರೀಮಠದ ಅನುಭವ ಮಂಟಪದಲ್ಲಿ ಶ್ರೀ ತೋಂಟದಾರ್ಯ ಜಾತ್ರೆಯ ಪ್ರಯುಕ್ತ ನಡೆಸುವ ಉಚಿತ ಯೋಗ ತರಬೇತಿ ಶಿಬಿರ ಪ್ರಾರಂಭೋತ್ಸವ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜಾತ್ರಾ ಮಹೋತ್ಸವ ಸಮಿತಿಯವರು ಯೋಗ ತರಬೇತಿ ಶಿಬಿರ ಏರ್ಪಡಿಸಿರುವದು ಸ್ತುತ್ಯ ಮತ್ತು ಅನುಕರಣೀಯ ಕಾರ್ಯವಾಗಿದೆ. ಇಂದಿನ ಯುವ ಜನಾಂಗಕ್ಕೆ ಯೋಗ ಅಗತ್ಯವಾಗಿದೆ. ಮುಂಬರುವ ದಿನಗಳಲ್ಲಿ ಇಂಥ ಸಮಾಜಮುಖಿ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಲೆಂದು ಶುಭ ಹಾರೈಸಿದರು.

ವೇದಿಕೆಯಲ್ಲಿ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ ಉಪಾಧ್ಯಕ್ಷ ಕರವೀರಯ್ಯ ಕೋರಿಮಠ, ಪ್ರೊ. ಡಿ.ಜೆ. ಜೋಗಣ್ಣವರ, ಶೈಲಾ ಕೊಡೆಕಲ್ಲ, ಕಾರ್ಯದರ್ಶಿ ಶಿವಪ್ಪ ಕೆ. ಕತ್ತಿ, ಸಹ–ಕಾರ್ಯದರ್ಶಿ ದಶರಥರಾಜ ಕೊಳ್ಳಿ, ಸಿದ್ಧರಾಮಪ್ಪ ಗೊಜನೂರ, ಸಂಘಟನಾ ಕಾರ್ಯದರ್ಶಿ ನಾಗಪ್ಪ ಸವಡಿ, ಕೋಶಾಧ್ಯಕ್ಷ ವೀರಣ್ಣ ಗೊಡಚಿ, ರಾಜಶೇಖರ ಲಕ್ಕುಂಡಿ ಉಪಸ್ಥಿತರಿದ್ದರು.

ಪತಂಜಲಿ ಯೋಗ ಸಮಿತಿ ಮಾತೆಯರಾದ ಶೈಲಾ ಕೋಡೇಕಲ್ ಮತ್ತು ಶೋಭಾ ಗುಗ್ಗರಿ ನೇತೃತ್ವದಲ್ಲಿ ಯೋಗಾಸನ ಪ್ರದರ್ಶನ ನಡೆಯಿತು. ಸಮಾರಂಭದಲ್ಲಿ ಶ್ರೀಮಠದ ಸದ್ಭಕ್ತ ಮಂಡಳಿ, ಗಣ್ಯಮಾನ್ಯರು, ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಮಾಜಿ ಅಧ್ಯಕ್ಷೆ ಸುವರ್ಣ ಹೊಸಂಗಡಿ ಪ್ರಾರ್ಥನೆ ಹೇಳಿದರು. ಜಾತ್ರಾ ಮಹೋತ್ಸವದ ಕಾರ್ಯದರ್ಶಿ ಶಿವಪ್ಪ ಕತ್ತಿ ಸ್ವಾಗತ ಕೋರಿದರು. ಯೋಗ ತರಬೇತಿ ಶಿಬಿರದ ಮಾರ್ಗದರ್ಶಕ ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು. ಕೋಶಾಧ್ಯಕ್ಷ ವೀರಣ್ಣ ಗೊಡಚಿ ವಂದಿಸಿದರು.

ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವದ ಅಧ್ಯಕ್ಷ ಡಾ. ಧನೇಶ ದೇಸಾಯಿ ಮಾತನಾಡಿ, ವೈದ್ಯಕೀಯ ಕ್ಷೇತ್ರಕ್ಕೆ ಸವಾಲಾಗಿರುವ ಅನೇಕ ಕಾಯಿಲೆಗಳು ಯೋಗದಿಂದ ಗುಣವಾಗುತ್ತವೆ. ಹೆಚ್ಚು ಖರ್ಚಿಲ್ಲದೇ ಎಲ್ಲ ವಯೋಮಾನದವರು, ಎಲ್ಲ ಕಾಲಕ್ಕೂ ಯೋಗ ಸಾಧನೆ ಮಾಡಲು ಸಾಧ್ಯವಾಗುವದು. ಈ ಯೋಗ ತರಬೇತಿ ಶಿಬಿರದ ಪ್ರಯೋಜನವನ್ನು ಎಲ್ಲರೂ ಪಡೆಯಬೇಕೆಂದು ಸಭಿಕರಲ್ಲಿ ಕೋರಿದರು.

## ಭ್ರಷ್ಟ ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಆಗ್ರಹ




■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ ಗದಗ–ಬೆಟಗೇರಿ ನಗರದ ಕೊಳಗೇರಿ ಪ್ರದೇಶಗಳಲ್ಲಿ ವಸತಿ ಕಲ್ಪಿಸಲು ಸರ್ಕಾರದಿಂದ 863 ಮನೆಗಳನ್ನು ಮಂಜೂರು ಮಾಡಿ 3 ವರ್ಷಗಳಾದರೂ ಈವರೆಗೂ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸದೇ ಫಲಾನುಭವಿಗಳ ಹೆಸರಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಣವನ್ನು ಲೂಟಿ ಮಾಡಿದ್ದಾರೆ. ಈ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ–ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಸ್ಲಂ ಬೋರ್ಡ್ ಕಚೇರಿಯೆದುರು ಬೃಹತ್ ಪ್ರತಿಭಟನೆ ನಡೆಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಸ್ಲಂ ಜನರಿಗೆ ಮೋಸ ಮಾಡಿ ಕೋಟ್ಯಾಂತರ ರೂ ಹಣ ದುರ್ಬಳಕ್ಕೆ ಮಾಡಿಕೊಂಡಿರುವ ಗುತ್ತಿಗೆದಾರರ ಕಾಮಗಾರಿಯ ಯಾವುದೇ ಬಾಕಿ ಬಿಲ್ ನೀಡಬಾರದು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಗುತ್ತಿಗೆದಾರರ ಮೇಲೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಈ ಹೋರಾಟದಲ್ಲಿ ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸಮಿತಿ ಪದಾಧಿಕಾರಿಗಳಾದ ಇಬ್ರಾಹಿಂ ಮುಲ್ಲಾ, ಮೆಹರುನಿಸಾ ಢಾಲಾಯತ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜಾಸಾಬ ಇಸ್ಮಾಯಿಲನವರ, ಮಂಜುನಾಥ ಶ್ರೀಗಿರಿ, ಮಲೇಶಪ್ಪ ಕಲಾಲ, ಮುನ್ನಾ ಅಗಡಿ, ಮಕ್ತುಮಸಾಬ ಮುಲ್ಲಾನವರ, ಸಲೀಮ ಹರಿಹರ, ದಾದು ಗೋಸಾವಿ, ಬಾಷಾಸಾಬ ಡಂಬಳ, ಮೈಮುನ ಬೈರಕದಾರ, ವೆಂಕಟೇಶ ಬಿಂಕದಕಟ್ಟಿ ಮುಂತಾದವರು ಪಾಲ್ಗೊಂಡಿದ್ದರು.

# ಜೇಡರ ದಾಸಿಮಯ್ಯ ಮಹಾನ್ ವಚನಕಾರ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿತ್ಯ ಜೀವನದ ಅನೇಕ ಸಂಗತಿಗಳನ್ನು ತಮ್ಮ ವಚನದ ಮೂಲಕ ಹೇಳಿ ಮಾನವರ ಜೀವನವನ್ನು ಸುಧಾರಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದವರು ಜೇಡರ ದಾಸಿಮಯ್ಯನವರು. ಅವರ ವಚನಗಳನ್ನು ಓದಿ ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಂಡರೆ ನಮ್ಮ ಜೀವನಕ್ಕೊಂದು ಅರ್ಥ ಬರುತ್ತದೆ ಎಂದು ಉಪನ್ಯಾಸಕ ನಾಗರಾಜ ಹೊನ್ನೂರ ಹೇಳಿದರು.

ಪಟ್ಟಣದ ಶ್ರೀ ಈಶ್ವರ ದೇವಸ್ಥಾನದಲ್ಲಿ ಕುರುಹಿನಶೆಟ್ಟಿ ಸಮಾಜದವರು ಹಮ್ಮಿಕೊಂಡಿದ್ದ ದೇವರ ದಾಸಿಮಯ್ಯ ಹಾಗೂ ಶ್ರೀರಾಮ ನವಮಿ ಉತ್ಸವದಲ್ಲಿ ಅವರು ಮಾತನಾಡಿದರು.

12ನೇ ಶತಮಾನ ಶರಣರ ವಚನಗಳಿಂದ ಸುವರ್ಣ ಶತಮಾನವಾಗಿತ್ತು. ಅಂದಿನ ನೂರಾರು ಶರಣರಲ್ಲಿ ಜೇಡರ ದಾಸಿಮಯ್ಯನವರೂ ಒಬ್ಬರು. ಅವರ ವಚನಗಳು ಜೀವನದರ್ಶನವನ್ನು ಮಾಡಿಸುವಲ್ಲಿ ಸಫಲವಾಗಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಿವಪುತ್ರಪ್ಪ ಸಂಗನಾಳ ಮಾತನಾಡಿ, ದಾರ್ಶನಿಕರು ಯಾವುದೇ ಜಾತಿ, ಮತ, ಪಂಗಡಕ್ಕೆ ಸೇರಿದ್ದರೂ, ಅವರಲ್ಲಿನ ಒಳ್ಳೆಯ ಅಂಶಗಳನ್ನು ಎಲ್ಲರೂ ಅಳವಡಿಸಿಕೊಳ್ಳುವುದು ಒಳಿತು. 12ನೇ ಶತಮಾನದಲ್ಲಿ ಜೇಡರ ದಾಸಿಮಯ್ಯ ಜೀವನದ ಅನುಭವಗಳನ್ನೇ ತನ್ನ ವಚನಗಳ ಮೂಲಕ ಹೇಳಿದರೆ, ಅದಕ್ಕೂ ಮುಂಚೆ ಶ್ರೀ ರಾಮನು ತನ್ನ ಸದ್ಗುಣಗಳ ಮೂಲಕ ಇಡೀ ಜಗತ್ತನ್ನೇ ಬೆಳಗಿದನು. ಇಂದಿನ ನಮ್ಮ ಮಾಸಿಕ ಸಭೆಗೆ ಹೊಂದಿಕೊಂಡು ಶ್ರೀರಾಮನವಮಿಯೂ ಬಂದಿರುವುದು ನಮಗೆ ಅತೀವ ಆನಂದವಾಗಿದೆ ಎಂದು ಹೇಳಿದರು.

ವೇದಿಕೆಯ ಮೇಲೆ ಶೇಖಪ್ಪ ಗೆದಗೇರಿ, ಮಲ್ಲಪ್ಪ ಸಮಗಂಡಿ ಉಪಸ್ಥಿತರಿದ್ದರು. ಸಭೆಯಲ್ಲಿ ಶಿವಪ್ಪ ಶಿವಾಪೂರ, ಬಸವರಾಜ ಗೆದಗೇರಿ, ವೀರಣ್ಣ ಆಡಿನ, ಮಂದಾಲಪ್ಪ ಸಂಗನಾಳ, ಅಶೋಕ ಗೆದಗೇರಿ, ಚನ್ನಪ್ಪ ಮುಳಗುಂದ, ಆರ್.ಎಂ. ಗೆದಗೇರಿ, ಎಂ.ಎಸ್. ಗೆದಗೇರಿ, ಟಿ.ಸಿ. ಗೆದಗೇರಿ, ಶಿವಪ್ಪ ಸಂಗನಾಳ, ಎನ್.ಸಿ. ಗೆದಗೇರಿ, ಎಂ.ಎಂ. ಗೆದಗೇರಿ, ಎಂ.ಬಿ. ಸಂಗನಾಳ, ಸಣ್ಣಪ್ಪ ಹರ್ತಿ, ನಾಗರಾಜ ಸಂಗನಾಳ, ಕಳಕಪ್ಪ ಮುಳಗುಂದ ಮುಂತಾದವರಿದ್ದರು.

ವಿರೂಪಾಕ್ಷಪ್ಪ ಸಂಗನಾಳ ಸ್ವಾಗತಿಸಿ, ವಂದಿಸಿದರು.

# ಶಾಂತರಸರಿಗೂ ಕೊಪ್ಪಳಕ್ಕೂ ಇದೆ ವಿಶೇಷ ನಂಟು: ಮದರಿ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಹೋರಾಟದ ಹಾದಿ, ಸಾಹಿತ್ಯ ಕ್ಷೇತ್ರದಲ್ಲಿ ಶಾಂತರಸ ಅವರದ್ದು ದೊಡ್ಡ ಹೆಜ್ಜೆ. ಅವರಿಗೂ ಕೊಪ್ಪಳಕ್ಕೂ ವಿಶೇಷ ನಂಟಿದೆ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಶಸ್ತಿ ವಿಜೇತರಾದ ಎ.ಎಂ.ಮದರಿ ಹೇಳಿದರು.

ಕವಿ ಸಮೂಹ ಕೊಪ್ಪಳ, ಸಂಸ ಥಿಯೇಟರ್ ಬೆಂಗಳೂರು, ಬಹುತ್ವ ಬಳಗ ಕೊಪ್ಪಳ, ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಸಹಯೋಗದಲ್ಲಿ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ನಡೆದ ಶಾಂತರಸರ ಶತಮಾನೋತ್ಸವ ಆಚರಣೆ

ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಹಿಂದಿನವರನ್ನು ನಾವು ನೆನಪಿಸಿಕೊಳ್ಳಬೇಕು. ಕೃತಜ್ಞತಾ ಭಾವದಿಂದ ಅವರಿಗೆ ಗೌರವವನ್ನು ಸಲ್ಲಿಸಬೇಕು. ಇದು ನಮ್ಮ ಕರ್ತವ್ಯವು ಹೌದು . ಆ ಊರು ಈ ಊರು ಯಾವ ಊರಾದರೇನು? ನಮ್ಮ ಊರೇ ನಮಗೆ ಚೆಂದ. ನಮ್ಮೆಲ್ಲರ ಕನಸಿನಲ್ಲಿ ಬರುವುದು ಸಹ ನಮ್ಮದೇ ಊರು, ನಮ್ಮದೇ ಭಾಷೆ. ಹೀಗೆ ಹೆಂಬೆರಾಳ ಶಾಂತರಸರಿಗೂ, ಕೊಪ್ಪಳಕ್ಕೂ ವಿಶೇಷ ನಂಟಿದೆ. ಹೀಗಾಗಿ ಈ ಕಾರ್ಯಕ್ರಮ ವಿಶೇಷವಾಗಿದೆ ಎಂದು ವಿಮರ್ಶಕ ಎ.ಎಂ ಮದರಿ ತಿಳಿಸಿದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಹಿಂಭಾಗದಲ್ಲಿ ಸಂಸ ರಂಗ ಮಂದಿರವಿದೆ. ಅವರು ದೊಡ್ಡ ನಾಟಕಕಾರರು. ಅವರ ಹೆಸರಿನ ಸಂಘಟನೆಯೂ ಸಹ ಈ ಕಾರ್ಯಕ್ರಮದಲ್ಲಿ ಜೊತೆಯಾಗಿರುವುದು ವಿಶೇಷ. ಕಾರ್ಯಕ್ರಮಗಳನ್ನು ಉದ್ಘಾಟನೆ ಮಾಡುವುದು ನೀರು ಎರೆವುದರ ಮೂಲಕ. ಅಂದರೆ ಅದು ಬೆಳೆಸುವುದರ ಸಂಕೇತ. ವಿದ್ಯಾರ್ಥಿಗಳು ಸಹ ಸಸಿಗಳಂತೆ ಅವರನ್ನು ಬೆಳೆಸಬೇಕೆಂದರೆ ವಿವಿಧ ವಿಷಯಗಳನ್ನು ಧಾರೆ ಎರೆದು ಬೆಳೆಸಬೇಕಾಗುತ್ತದೆ ಎಂದು ಹೇಳಿದರು.

ಬಂಡಾಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಕೊಪ್ಪಳಕ್ಕೆ ಬರಲಿರುವ ಫ್ಯಾಕ್ಟರಿ ಬಗ್ಗೆ ವಿದ್ಯಾರ್ಥಿಗಳು, ಜನರು ಎಚ್ಚೆತ್ತುಕೊಳ್ಳಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಡಿ ಎಚ್.ನಾಯ್ಕ ಮಾತನಾಡಿ, ಕಾಲೇಜಿನ ಕನ್ನಡ ವಿಭಾಗ ಇಂಥ ಕಾರ್ಯಕ್ರಮಗಳನ್ನು ಹೆಚ್ಚಾಗಿ, ಅಚ್ಚುಕಟ್ಟಾಗಿ ರೂಪಿಸಬೇಕು. ವಿದ್ಯಾರ್ಥಿಗಳು ಸಹ ಇಂಥ ಕಾರ್ಯಕ್ರಮಗಳಿಂದ ಸಾಧಕರ ಬದುಕು ಅರಿತು, ಪ್ರೇರಣೆ ಪಡೆದು, ಸಾಧನೆಯ ಹಾದಿಯಲ್ಲಿ ಸಾಗಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಕಾಲೇಜಿನ ಕನ್ನಡ ವಿಭಾಗದ ಸಹಪ್ರಾಧ್ಯಾಪಕರಾದ ಡಾ.ಭಾಗ್ಯಜ್ಯೋತಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ, ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜುಂದಾರ, ಹಿರಿಯ ಚಿಂತಕ ರವಿ ಕಾಂತನವರ, ಬಿಕನಳ್ಳಿಯ ರಂಗಭೂಮಿ ಕಲಾವಿದ ಮಲ್ಲಪ್ಪ ಕುರಿ, ಬಹುತ್ವ ಬಳಗದ ಎಚ್. ವಿ.ರಾಜಾಭಕ್ಷಿ, ಚುಟುಕು ಕವಿ ಶಿವಪ್ರಸಾದ ಹಾದಿಮನಿ, ಕಾಲೇಜಿನ ಬೋಧಕ ಸಿಬ್ಬಂದಿ ಡಾ.ಪ್ರಕಾಶ್ ಬಳ್ಳಾರಿ, ಡಾ.ಬೋರೇಶ್.ಇ, ಎಂ.ಶಿವಣ್ಣ, ಬಸವರಾಜ ಕರುಗಲ್, ಉಮೇಶ್ ಅಂಗಡಿ, ಮತ್ತಿತರರು ಇದ್ದರು.

ಚೈತ್ರಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಸಾಹಿತಿ, ನ್ಯಾಯವಾದಿಗಳಾದ ವಿಜಯ ಅಮೃತರಾಜ್ ಸ್ವಾಗತಿಸಿದರು. ಕವಿಸಮೂಹದ ಸಿರಾಜ್ ಬಿಸರಳ್ಳಿ ಪ್ರಾಸ್ತಾವಿಕ ಮಾತನಾಡಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಡಾ.ಅನ್ನಪೂರ್ಣ ಗೋಸಬಾಳ ವಂದಿಸಿದರು.

### ಕಾಲಿಮಿರ್ಚಿ, ಭಾವಿಕಟ್ಟಿಯವರಿಂದ ವಿಶೇಷ ಉಪನ್ಯಾಸ:

ಶಾಂತರಸರ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಅಕ್ಬರ್ ಸಿ.ಕಾಲಿಮಿರ್ಚಿಯವರು ಶಾಂತರಸರ ಬಾಲ್ಯ, ಶಿಕ್ಷಣ, ವಿದ್ಯಾರ್ಥಿ ಹಂತದಲ್ಲೇ ತುಳಿದ ಹೋರಾಟದ ದಾರಿ, ಸಾಹಿತ್ಯ ಕ್ಷೇತ್ರದಲ್ಲಿ ಅವರ ಸಾಧನೆ, ಬದುಕು ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಗಾಯತ್ರಿ ಭಾವಿಕಟ್ಟಿಯವರು ಶಾಂತರಸರು ಬರೆದ ಉರಿದ ಬದುಕು, ಸಣ್ಣ ಗೌಡಶಾನಿ, ನಾಯಿ ಮತ್ತು ಪಿಂಚಣಿ ಕೃತಿಗಳ ಸಾರವನ್ನು ವಿಶೇಷ ಉಪನ್ಯಾಸದಲ್ಲಿ ಸಂಕ್ಷಿಪ್ತವಾಗಿ ತಿಳಿಸಿ, ಶಾಂತರಸರ ಕೃತಿಗಳ ಮಹತ್ವ ವಿವರಿಸಿದರು.

### ಗಮನ ಸೆಳೆದ ವಿದ್ಯಾರ್ಥಿಗಳ ಗಜಲ್ ವಾಚನ

ಸಮಾರಂಭದಲ್ಲಿ ಕಾಲೇಜಿನ ಬಿ.ಎ.ಎರಡನೇ ಸೆಮಿಸ್ಟರ್ ವಿದ್ಯಾರ್ಥಿಗಳಾದ ಪೃಥ್ವಿ, ಶ್ರವಣಕುಮಾರ್ ಹಾಗೂ ಬಿ.ಎ.ಆರನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳಾದ ಶ್ರೀದೇವಿ, ಚೈತ್ರಾ, ಮಂಜುಳಾ ಗಜಲ್ ವಾಚನ ಮಾಡಿ ಗಮನ ಸೆಳೆದರು.

### ಸಾಧಕರಿಗೆ ಸನ್ಮಾನ

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಅಲ್ಲಮಪ್ರಭು ಬೆಟ್ಟದೂರು, ಎ.ಎಂ.ಮದರಿ, ಪ್ರಸಕ್ತ ಸಾಲಿನಲ್ಲಿ ಪಿಎಚ್.ಡಿ ಪದವಿ ಪಡೆದ ಕಾಲೇಜಿನ ಅತಿಥಿ ಉಪನ್ಯಾಸಕರಾದ ಕನ್ನಡ ವಿಭಾಗದ ಡಾ.ಮಹಾಂತೇಶ ಬಿ.ನೆಲಾಗಣಿ, ಇಂಗ್ಲಿಷ್ ವಿಭಾಗದ ಡಾ.ಶಿವಬಸಪ್ಪ ಮಸ್ಕಿ, ಸಮಾಜಶಾಸ್ತ್ರ ವಿಭಾಗದ ಡಾ.ವಿಜಯಕುಮಾರ್ ಕೆ.ತೋಟದ, ಡಾ.ಪ್ರಕಾಶ ಜಡಿಯವರ ಅವರನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನ ಕಾರ್ಯಕ್ರಮವನ್ನು ಡಾ.ತುಕಾರಾಂ ನಾಯ್ಕ ನಡೆಸಿಕೊಟ್ಟರು.




## 'ಡಾ. ಬಾಬು' ಹಸಿರು ಕ್ರಾಂತಿಯ ಹರಿಕಾರ




■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಇಲ್ಲಿನ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಅವರು ಡಾ. ಬಾಬು ಜಗಜೀವನರಾಮ್ ಜಯಂತಿಯ ನಿಮಿತ್ತ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ಪಿ.ವೈ. ನಾಯಕ್, ಡಾ. ಬಾಬು ಜಗಜೀವನರಾಮ್ ದಲಿತರಿಗೆ ಸಮಾನತೆಯನ್ನು ಸಾಧಿಸಲು ಸಮರ್ಪಿತವಾದ ಅಖಿಲ ಭಾರತ ಶೋಷಿತ ವರ್ಗಗಳ ಲೀಗ್‌ನ್ನು ಸ್ಥಾಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಕಾರ್ಮಿಕ ಸಚಿವರಾಗಿ ಭಾರತದ ಮೊದಲ ಕ್ಯಾಬಿನೆಟ್ ಮತ್ತು ಭಾರತದ ಸಂವಿಧಾನ ಸಭೆಯ ಸದಸ್ಯರಾದರು. ಇವರನ್ನು ಹಸಿರು ಕ್ರಾಂತಿಯ ಹರಿಕಾರ ಎಂದು ಕರೆಯುತ್ತಾರೆ ಮತ್ತು ಕಾರ್ಮಿಕ ಇಲಾಖೆಯನ್ನು ಹುಟ್ಟುಹಾಕಿದ ಶಿಲ್ಪಿ ಎಂದು ಹೇಳುತ್ತಾರೆ. ಅವರ ಸ್ವಾಭಿಮಾನದ ಸಂದೇಶಗಳನ್ನು ನಮ್ಮ ಜೀವನದಲ್ಲಿಯೂ ಅಳವಡಿಸಿಕೊಳ್ಳೋಣ ಎಂದು ನುಡಿದರು.

ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾದ ಪಿ.ಆರ್. ಕಿರಣಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಗಣೇಶ ರಾಠೋಡ್, ಪ್ರಸನ್ನಕುಮಾರ ಬಾಳಾನಾಯಕ್, ಸಿದ್ದೇಶ್ವರ ಹೆಬ್ಬಾಳ, ಶಶಿಧರ ಕುಂಬಾರ, ಜಗದಂಬಾ ಕೋಪರ್ಡೆ, ಶ್ರೀನಾಥ ಜಿ, ಎಂ.ಬಿ. ಕಪಲಿ, ಸುಮನಾ ಯು ಹಾಗೂ ಅಧಿಕಾರಿಗಳಾದ ರವಿ ಅಂಚಿಗಾವಿ, ಪಿ.ಆರ್. ಕಿರಣಗಿ, ನವೀನಕುಮಾರ ತಿಪ್ಪಾ, ಆರ್.ಎಲ್. ಭಜಂತ್ರಿ, ತೈಸೀನಬಾನು ಪಟವೇಗಾರ ಸೇರಿದಂತೆ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು. ವಿರೂಪಾಕ್ಷ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ನರೇಂದ್ರ ಮೋದಿ ವಿಶ್ವಕ್ಕೇ ನಾಯಕತ್ವ ಕೊಟ್ಟವರು



■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರಧಾನಿ ನರೇಂದ್ರ ಮೋದಿಯವರು ಬರೀ ಭಾರತಕ್ಕೆ ನಾಯಕತ್ವ ಕೊಟ್ಟವರಲ್ಲ, ವಿಶ್ವಕ್ಕೇ ನಾಯಕತ್ವ ಕೊಟ್ಟವರು ಎಂದು ಬಿಜೆಪಿ ಡಂಬಳ ಮಂಡಳದ ಅಧ್ಯಕ್ಷ ಅಂದಪ್ಪ ಹಾರೂಗೇರಿ ಹೇಳಿದರು.

ರವಿವಾರ ಭಾರತೀಯ ಜನತಾ ಪಕ್ಷದ 45ನೇ ಸಂಸ್ಥಾಪನಾ ದಿನಾಚರಣೆ ಪ್ರಯುಕ್ತ ಡಂಬಳ ಹೋಬಳಿಯಾದ್ಯಂತ, ಡಂಬಳ ಮಂಡಲದ ಹಳ್ಳಿಗುಡಿ ಗ್ರಾಮದ ಬೂತ್ ನಂ. 209 ಮತ್ತು 210ರಲ್ಲಿ ಬೂತ್ ಅಧ್ಯಕ್ಷರಾದ ಆನಂದ ನಾಲ್ಕುರವಿ, ಮುತ್ತು(ಮುದಿಯಪ್ಪ) ಕರಮುಡಿ ಅವರ ಮನೆಯ ಮೇಲೆ ಧ್ವಜ ಹಾರಿಸುವುದರ ಮೂಲಕ ಸಂಸ್ಥಾಪನಾ ದಿನದ ಆಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನರೇಂದ್ರ ಮೋದಿಯವರು ಜಾರಿಗೊಳಿಸಿದ ಕಾರ್ಯಕ್ರಮಗಳ ಬಗ್ಗೆ ಮನೆ ಮನೆಗೆ ತಿಳಿಸಬೇಕು ಮತ್ತು ಮಾಜಿ ಸಚಿವರಾದ ಕಳಕಪ್ಪ ಬಂಡಿಯವರು ರೋಣ ಕ್ಷೇತ್ರದಲ್ಲಿ ಹಮ್ಮಿಕೊಂಡಿರುವ ನೂರಾರು ಅಭಿವೃದ್ಧಿ ಕಾರ್ಯಕ್ರಮಗಳನ್ನು ತಿಳಿಸಬೇಕೆಂದು ಕಾರ್ಯಕರ್ತರಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಸವರಾಜ ಚನ್ನಳ್ಳಿ, ಮುದ್ಲಿಂಗಪ್ಪ ಕೊರ್ಲಹಳ್ಳಿ, ಮಂಡಲ ಪ್ರದಾನ ಕಾರ್ಯದರ್ಶಿ ಪ್ರಭು ಕರಮುಡಿ, ಜಿಲ್ಲಾ ಯುವ ಮೋರ್ಚಾ ಉಪಾಧ್ಯಕ್ಷ ರಾಜೇಶ ಅರಕಾಲ, ಪಕ್ಷದ ಹಿರಿಯರು, ಯುವಕರು, ಕಾರ್ಯಕರ್ತರು ಇದ್ದರು.

## ನೇರ ಸಂದರ್ಶನ, ಸ್ಥಳದಲ್ಲೆ ನೇಮಕಾತಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕೆ.ಸಿ. ರಾಣಿ ರಸ್ತೆಯ ಇನ್ಸ್‌ಪೈರ್ ಟೆಕ್ನಾಲಜೀಸ್ ಕಂಪ್ಯೂಟರ್ ತರಬೇತಿ ಕೇಂದ್ರದಲ್ಲಿ ಎಪ್ರಿಲ್ 9ರಂದು ಬೆಳಿಗ್ಗೆ 9.30ಕ್ಕೆ ಬೆಂಗಳೂರಿನ ಪಾಪ್ಸ್‌ಕಾನ್ ಕಂಪನಿ ವತಿಯಿಂದ ಟೆಕ್ನಿಕಲ್ ಆಪರೇಟರ್, ಕ್ವಾಲಿಟಿ ಇನ್ಸ್‌ಪೆಕ್ಟರ್ ಮತ್ತು ಅಸೆಂಬ್ಲಿ ಆಪರೇಟರ್ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯಲಿದೆ. ಕಂಪನಿಯು ಆಯ್ಕೆಯಾದ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ವಸತಿಯೊಂದಿಗೆ ತಿಂಗಳಿಗೆ 15200 ರೂ ವೇತನ ನೀಡಲಿದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಅಥವಾ ಯಾವುದೇ ಪದವೀದರರು ಭಾಗವಹಿಸಬಹುದು. ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಬ್ಯಾಂಕ್ ಪಾಸ್‌ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್, 4 ಪಾಸ್‌ಪೋರ್ಟ್ ಅಳತೆಯ ಫೋಟೋ ತರಬೇಕು. ಈ ಅವಕಾಶವನ್ನು ಗದಗ ಜಿಲ್ಲೆಯ ಉದ್ಯೋಗಾಸಕ್ತರು ಸದುಪಯೋಗಪಡಿಸಿಕೊಳ್ಳಬೇಕೆಂದು ಇನ್ಸ್‌ಪೈರ್ ಟೆಕ್ನಾಲಜೀಸ್‌ನ ಚಂದ್ರಶೇಖರ ಅಣ್ಣಿಗೇರಿ ಕೋರಿದ್ದು, ಹೆಚ್ಚಿನ ಮಾಹಿತಿಗಾಗಿ–7624863543/ 7619531919 ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ‘ಜನಾಕ್ರೋಶ ಯಾತ್ರೆ’..ಇದು ಕೇವಲ ಪ್ರಚಾರದ ಗಿಮಿಕ್!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯ ಸರ್ಕಾರದ ಬೆಲೆ ಏರಿಕೆ ಖಂಡಿಸಿ ಬಿಜೆಪಿ ಕೈಗೊಂಡಿರುವ ಜನಾಕ್ರೋಶ ಯಾತ್ರೆಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ವ್ಯಂಗ್ಯವಾಡಿದ್ದಾರೆ. ಈ ಕುರಿತು ನಗರದಲ್ಲಿ ಮಾತನಾಡಿದ ಅವರು, ಬಿಜೆಪಿಯವರು ನಡೆಸುತ್ತಿರುವ ಜನಾಕ್ರೋಶ ಯಾತ್ರೆ ಕಾಂಗ್ರೆಸ್ ವಿರುದ್ಧ ಅಲ್ಲ, ಮೋದಿ ವಿರುದ್ಧ ಎಂದು ಟೀಕಿಸಿದರು.

### ತೋಂಟದಾರ್ಯ ಜಾತ್ರೆ ಅಂಗವಾಗಿ ವ್ಯಸನ ಮುಕ್ತ ಸಮಾಜ ಜಾಗೃತಿಗಾಗಿ ಪಾದಯಾತ್ರೆ

## ವ್ಯಸನಮುಕ್ತ ಯುವಜನಾಂಗದಿಂದ ಸದೃಢ ಸಮಾಜ

■ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕ ದಿನಗಳಲ್ಲಿ ನಾನಾ ಬಗೆಯ ವ್ಯಸನಗಳು ಯುವ ಜನಾಂಗವನ್ನು ಆಕರ್ಷಿಸುತ್ತಿದ್ದು, ಇವುಗಳ ಅಪಾಯ ವ್ಯಸನಿಗಳ ಕುಟುಂಬಕ್ಕೆ ಮಾತ್ರವಲ್ಲದೇ ಸಮಾಜಕ್ಕೂ ತಟ್ಟುತ್ತದೆ. ಸದೃಢ ಸಮಾಜ ಕಟ್ಟಲು ಯುವಜನಾಂಗ ವ್ಯಸನಮುಕ್ತರಾಗುವುದು ಅವಶ್ಯಕವಾಗಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಅವರು ರವಿವಾರ ನಗರದ ವಾರ್ಡ್ ನಂ.15 ಹಾಗೂ 16ರಲ್ಲಿ ತೋಂಟದಾರ್ಯ ಮಠದ 2025ನೇ ಸಾಲಿನ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ‘ವ್ಯಸನ ಮುಕ್ತ ಸಮಾಜ ಜಾಗೃತಿ’ ಪಾದಯಾತ್ರೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಭಾರತ ಅತಿ ಹೆಚ್ಚು ಯುವಜನರನ್ನು ಹೊಂದಿದ ದೇಶವಾಗಿದ್ದು, ದೇಶದ ಅಭಿವೃದ್ಧಿಯ ದೃಷ್ಟಿಯಿಂದ ಇದು ಧನಾತ್ಮಕ ಸಂಗತಿಯಾಗಿದೆ. ಯುವಕರು ವ್ಯಸನ–ನಶೆ–ಆಕರ್ಷಣೆಗಳಿಂದ ಹೊರಬರಲು ಸೃಜನಾತ್ಮಕ–ಆಧ್ಯಾತ್ಮಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಮದ್ಯಪಾನ, ಧೂಮಪಾನ, ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು



ಎಷ್ಟೇ ಅರಿವಿದ್ದರೂ ಸುಶಿಕ್ಷಿತರು ಸಹ ಅಂಥ ಚಟಗಳಿಗೆ ಬಲಿಯಾಗುತ್ತಿರುವುದು ವಿಪರ್ಯಾಸವಾಗಿದೆ. ಮಹಾನ್ ಸಾಧಕರನ್ನು ಆದರ್ಶವಾಗಿಟ್ಟುಕೊಂಡು ಒಳ್ಳೆಯ ವ್ಯಕ್ತಿತ್ವ ಬೆಳೆಸಿಕೊಂಡಾಗ ಇಂಥ ಚಟಗಳಿಂದ ಹೊರಬರಲು ಸಾಧ್ಯ ಎಂದರು.

ಪಾದಯಾತ್ರೆಯು ಶಹಾಪೂರಪೇಟೆಯಿಂದ ಆರಂಭವಾಗಿ ಡಿಸಿ ಮಿಲ್ ರಸ್ತೆ, ಡೋರಗಲ್ಲಿ, ಹೊಂಬಳನಾಕಾ ಮಾರ್ಗವಾಗಿ ಗಂಗಾಪೂರಪೇಟೆಯ ದುರ್ಗಾ ದೇವಸ್ಥಾನದಲ್ಲಿ ಸಂಪನ್ನಗೊಂಡಿತು. ನೂರಾರು ಭಕ್ತರು ಪಾದಯಾತ್ರೆಯಲ್ಲಿ ಶ್ರೀಗಳೊಂದಿಗೆ ಹೆಜ್ಜೆ ಹಾಕಿದರು. ಭೈರನಟ್ಟಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು, ಹುಕ್ಕೇರಿ ಮಠದ ಸದಾಶಿವ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ತೋಂಟದಾರ್ಯ ಮಠದ ಆಡಳಿತಾಧಿಕಾರಿ ಪ್ರೊ.ಎಸ್.ಎಸ್. ಪಟ್ಟಣಶೆಟ್ಟರ್, ಎಂ.ಎಸ್. ಅಂಗಡಿ, ನಗರಸಭೆ ಸದಸ್ಯರಾದ ಕೃಷ್ಣಾ ಪರಾಪೂರ, ಚಂದ್ರು ತಡಸದ, ಎಂ.ಎಸ್. ಪಾಟೀಲ, ಬಸವರಾಜ ಬೆಳದಡಿ, ಎಸ್.ಎನ್. ಬಳ್ಳಾರಿ, ರಾಚಪ್ಪ ಮಿಣಜಗಿ, ಬಸವರಾಜ ಕವಳಿಕಾಯಿ, ವಿಜಯ ಕಲ್ಮನಿ, ಅಶೋಕ ಕುಡಿತಿನಿ, ರಾಮು ಬಳ್ಳಾರಿ ಸೇರಿದಂತೆ ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ–2025, ಬಸವದಳ,

> ವಿರಕ್ತಮಠದ ಡಾ. ಮಹಾಂತಪ್ರಭು ಮಹಾಸ್ವಾಮಿಗಳು ಮಾತನಾಡಿ, ಜಾತ್ರೆಗಳಲ್ಲಿ ಇಂತಹ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸುವ ಪದ್ಧತಿಯನ್ನು ಜಾರಿಗೆ ತಂದ ಕೀರ್ತಿ ಲಿಂ. ಸಿದ್ಧಲಿಂಗ ಮಹಾಸ್ವಾಮಿಗಳಿಗೆ ಸಲ್ಲುತ್ತದೆ. ಲಿಂಗೈಕ್ಯ ಗುರುಗಳು ಇಡೀ ದಕ್ಷಿಣ ಭಾರತದಲ್ಲೇ ಕೋಮು ಸೌಹಾರ್ದತೆ ಹಾಗೂ ಏಕತೆಗಾಗಿ ಕೇಂದ್ರ ಸರ್ಕಾರದ ಪ್ರಶಸ್ತಿ ಪಡೆದ ಮೊದಲಿಗರಾಗಿದ್ದು, ಅವರ ಆಶಯದಂತೆ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಜಾತ್ರೆಯಲ್ಲಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಅಭಿನಂದನೀಯ ಎಂದರು.

ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ, ದುರ್ಗಮ್ಮದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ರೈತ ಸಂಘದ ಪ್ರತಿನಿಧಿಗಳು ಇದ್ದರು.

ಪಾದಯಾತ್ರೆಯ ಯಶಸ್ಸಿಗೆ ಕೈಜೋಡಿಸಿದ ಎಲ್ಲರಿಗೂ ಜಾತ್ರಾ ಸಮಿತಿ ಸದಸ್ಯರು ಅಭಿನಂದನೆ ಸಲ್ಲಿಸಿದರು. ಕೊಟ್ರೇಶ ಮೆಣಸಿನಕಾಯಿ ನಿರೂಪಿಸಿದರು.

### ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಉಚಿತ ಆರೋಗ್ಯ ತಪಾಸಣೆ

## ಆರೋಗ್ಯದ ಕಾಳಜಿ ವಹಿಸದಿರುವುದು ಅಪಾಯಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕ ದಿನಮಾನದಲ್ಲಿ ದೈಹಿಕ ಶ್ರಮ ಕ್ಷೀಣಿಸಿ ಮಾನಸಿಕ ಶ್ರಮ ಹೆಚ್ಚಾಗುತ್ತಿದ್ದು, ದೈನಂದಿನ ವೃತ್ತಿಪರ ಜಂಜಾಟಗಳ ಮಧ್ಯೆ ಆರೋಗ್ಯದ ಕಾಳಜಿ ವಹಿಸದೇ ಇರುವುದು ಅಪಾಯಕಾರಿಯಾಗಿದೆ. ನಿಯಮಿತ ಆರೋಗ್ಯ ತಪಾಸಣೆ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಪ್ರತಿ ವರ್ಷದ ತೋಂಟದಾರ್ಯ ಜಾತ್ರೆಯಲ್ಲಿ ಆರೋಗ್ಯಕ್ಕೆ ಸಂಬಂಧಪಟ್ಟ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು. ಅವರು ರವಿವಾರ ಇಲ್ಲಿನ ಜಗದ್ಗುರು ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ 2025ನೇ ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಉಚಿತ ಆರೋಗ್ಯ ತಪಾಸಣಾ ಶಿಬಿರದ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು. ಆರೋಗ್ಯವೇ ಮಾನವನ ನಿಜವಾದ ಸಂಪತ್ತಾಗಿದ್ದು, ನೆಮ್ಮದಿಯ ಜೀವನಕ್ಕೆ ಆರೋಗ್ಯವೇ ಅಡಿಗಲ್ಲಾಗಿದೆ. ಈ



ಬಾರಿಯ ಜಾತ್ರಾ ಸಮಿತಿ ಅಧ್ಯಕ್ಷರಾದ ಡಾ. ಧನೇಶ್ ದೇಸಾಯಿ ಅವರು ವಿಶೇಷ ಕಾಳಜಿ ವಹಿಸಿ ನುರಿತ ವೈದ್ಯರ ತಂಡವನ್ನೇ ಶಿಬಿರಕ್ಕೆ ಕರೆತಂದಿದ್ದು, ರೋಗಿಗಳಿಗೆ ವೈದ್ಯರೇ ದೇವರಾದರೆ ತಮಗೆ ರೋಗಿಗಳೇ ದೇವರೆಂದು ತಿಳಿದು ಸೇವೆಯನ್ನು ಧ್ಯೇಯವನ್ನಾಗಿ ಇಟ್ಟುಕೊಂಡಿರುವ ವೈದ್ಯರು ಅಭಿನಂದನಾರ್ಹರು ಎಂದರು. ಖ್ಯಾತ ಮನೋವೈದ್ಯರಾದ ಡಾ. ಆನಂದ್ ಪಾಂಡುರಂಗಿ ತಮ್ಮ ಹಾಗೂ ತೋಂಟದಾರ್ಯ ಮಠದ ನಡುವಿನ ನಿರಂತರ 40 ವರ್ಷಗಳ ಅವಿನಾಭಾವ ಸಂಬಂಧದ ಕುರಿತು ಮಾತನಾಡಿದರು. ಹೃದಯ ಸ್ತಂಭನವಾದಾಗ ಸಾಮಾನ್ಯ ನಾಗರಿಕರು ಯಾವ ಪ್ರಾಥಮಿಕ ಕ್ರಮ

> ಜಾತ್ರಾ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ ಮಾತನಾಡಿ, ಈ ಬಾರಿಯ ಜಾತ್ರಾ ಮಹೋತ್ಸವದಲ್ಲಿ ವಿಶಿಷ್ಠ ಹಾಗೂ ಜನೋಪಯೋಗಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ವ್ಯಸನ ಮುಕ್ತ ಸಮಾಜಕ್ಕೆ ಪಾದಯಾತ್ರೆ, ಆರೋಗ್ಯ ತಪಾಸಣೆ, ಕೃಷಿ ಮೇಳಗಳು ಪ್ರಮುಖವಾಗಿವೆ. ನಿಯಮಿತ ಆರೋಗ್ಯ ತಪಾಸಣೆ ಇಂದಿನ ದಿನಮಾನದ ಅಗತ್ಯವಾಗಿದ್ದು, ಅನೇಕ ವೈದ್ಯರು ಶ್ರೀಮಠದ ಮೇಲಿನ ಅಭಿಮಾನ ಹಾಗೂ ಗೌರವಕ್ಕಾಗಿ ಶಿಬಿರದಲ್ಲಿ ಪಾಲ್ಗೊಂಡಿದ್ದಾರೆ ಎಂದರು.

ಕೈಗೊಳ್ಳಬೇಕು ಎಂಬುದರ ಕುರಿತು ಪ್ರಾತ್ಯಕ್ಷಿಕೆ ತೋರಿಸಲಾಯಿತಲ್ಲದೆ, ಕಿಡ್ನಿ, ಲಿವರ್, ಕಣ್ಣು ಸೇರಿದಂತೆ ಅಂಗಾಂಗಗಳ ದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ಜಾತ್ರಾ ಆರೋಗ್ಯ ಸಮಿತಿ ಅಧ್ಯಕ್ಷರಾದ ಡಾ. ಶರಣಬಸವೇಶ್ವರ ಆಲೂರ, ಎಲುಬು–ಕೀಲು ತಜ್ಞರಾದ ಡಾ. ಎಸ್.ಬಿ. ಶೆಟ್ಟರ್, ಡಾ. ಪ್ರಕಾಶ ಸಂಕನೂರ, ಡಾ. ಸಂದೀಪ ಕವಳಿಕಾಯಿ, ಡಾ. ಶ್ರೀಧರ ಕುರಡಗಿ, ಡಾ. ಎಸ್.ಎನ್. ಬೆಳವಡಿ, ಬಸವರಾಜ ಚನ್ನಪ್ಪಗೌಡರ, ಡಾ. ಜಯಕುಮಾರ ಬ್ಯಾಳಿ ಸೇರಿದಂತೆ ಅನೇಕ ವೈದ್ಯರು ಪಾಲ್ಗೊಂಡಿದ್ದರು. ನ್ಯಾಶನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಶನ್, ಇಂಡಿಯನ್ ಮೆಡಿಕಲ್ ಅಸೋಸಿಯೇಶನ್, ಡಿಜಿಎಂ ಆಯುರ್ವೇದ ಕಾಲೇಜು, ಚಿರಾಯು ಆಸ್ಪತ್ರೆಗಳು ಜಾತ್ರಾ ಸಮಿತಿಗೆ ಸಹಯೋಗ ನೀಡಿದವು. ತೋಂಟದಾರ್ಯ ಮಠದ ಆಡಳಿತಾಧಿಕಾರಿ ಪ್ರೊ. ಎಸ್. ಎಸ್ ಪಟ್ಟಣಶೆಟ್ಟರ, ಜಾತ್ರಾ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ, ಉಪಾಧ್ಯಕ್ಷರಾದ ಕರವೀರಯ್ಯ ಕೋರಿಮಠ, ಪ್ರೊ. ಡಿ.ಜಿ. ಜೋಗಣ್ಣವರ, ಶೈಲಾ ಕೊಡೆಕಲ್ಲ, ಕಾರ್ಯದರ್ಶಿ ಶಿವಪ್ಪ ಕತ್ತಿ, ಸಹ ಕಾರ್ಯದರ್ಶಿ ದಶರಥ ಕೊಳ್ಳಿ, ಸಿದ್ಧರಾಮಪ್ಪ ಗೊಜನೂರ, ಸಂಘಟನಾ ಕಾರ್ಯದರ್ಶಿ ನಾಗಪ್ಪ ಸವಡಿ, ಕೋಶಾಧ್ಯಕ್ಷ ವೀರಣ್ಣ ಗೊಡಚಿ, ಸಹ ಕೋಶಾಧ್ಯಕ್ಷ ರಾಜಶೇಖರ ಲಕ್ಕುಂಡಿ ಸೇರಿದಂತೆ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ, ಕೊಟ್ರೇಶ ಮೆಣಸಿನಕಾಯಿ ಹಾಗೂ ಮಠದ ಭಕ್ತರು ಪಾಲ್ಗೊಂಡಿದ್ದರು. ಸುಮಾರು 500ಕ್ಕೂ ಹೆಚ್ಚು ಸಾರ್ವಜನಿಕರು ಭಾಗವಹಿಸಿ ಶಿಬಿರದ ಉಪಯೋಗ ಪಡೆದರು.

## ರಾಮಾಯಣದ ಪ್ರಸಂಗಗಳು ಬದುಕಿಗೆ ಆದರ್ಶ



■ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ

ಪಟ್ಟಣದ ಶ್ರೀ ಶಂಕರಭಾರತಿ ಮಠದಲ್ಲಿ ಬ್ರಹ್ಮವೃಂದದ ವತಿಯಿಂದ ರವಿವಾರ ಶ್ರೀರಾಮ ನವಮಿ ನಿಮಿತ್ತ ಶ್ರೀರಾಮನ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ಭಕ್ತಿಯಿಂದ ನೆರವೇರಿಸಲಾಯಿತು.

ಶ್ರೀಮಠದಲ್ಲಿ ಸೇರಿದ್ದ ಸುಮಂಗಲೆಯರು ಶ್ರೀರಾಮ ಸ್ವರೂಪಿ ಮೂರ್ತಿಯನ್ನು ತೊಟ್ಟಿಲಲ್ಲಿ ಹಾಕಿ ಭಕ್ತಿಯಿಂದ ತೂಗಿ ಭಕ್ತಿಗೀತೆ ಹಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ವೇ.ಮೂ. ಬಾಲಚಂದ್ರಭಟ್ ಹುಲಮನಿ, ಧರ್ಮ ಸಂಸ್ಥಾಪನೆಗಾಗಿ ಮರ್ಯಾದಾ ಪುರುಷೋತ್ತಮನಾಗಿ ಅವತಾರವೆತ್ತಿದ ಶ್ರೀರಾಮ ಸಾಕ್ಷಾತ್ ದೇವರೇ ಆಗಿದ್ದಾನೆ. ಸೂರ್ಯವಂಶಸ್ಥನಾದ ಶ್ರೀರಾಮನು ಕಾಲಾತೀತ, ಗುಣಾತೀತನಾಗಿದ್ದು, ಶ್ರೀರಾಮನೇ ಮೂಲವಾಗಿರುವ ರಾಮಾಯಣದ ಪ್ರಸಂಗಗಳು ಬದುಕಿಗೆ ಆದರ್ಶವಾಗಿವೆ ಎಂದರು.

ಹಿರಿಯ ಮುಖಂಡ ವಿ.ಎಲ್. ಪೂಜಾರ, ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್, ತಾಲೂಕಾಧ್ಯಕ್ಷ ಕೃಷ್ಣ ಕುಲಕರ್ಣಿ, ಮಾತನಾಡಿದರು. ಬಳಿಕ ಭಕ್ತಾದಿಗಳಿಗೆ ಪಾನಕ, ಕೋಸಂಬರಿ ಪ್ರಸಾದ ವಿತರಿಸಲಾಯಿತು.

ಪಟ್ಟಣದ ಬಹುತೇಕ ದೇವಸ್ಥಾನಗಳಲ್ಲಿ ರವಿವಾರ ಶ್ರೀರಾಮ ನವಮಿ ಕಾರ್ಯಕ್ರಮವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷದ್ ಲಕ್ಷ್ಮೇಶ್ವರ ಪ್ರಖಂಡದ ವತಿಯಿಂದ ಶ್ರೀರಾಮೋತ್ಸವವನ್ನು ನೆರವೇರಿಸಲಾಯಿತು.

ಈ ವೇಳೆ ವಿಎಚ್‌ಪಿ ಲಕ್ಷ್ಮೇಶ್ವರ ಪ್ರಖಂಡದ ಅಧ್ಯಕ್ಷ ಬಸವರಾಜ ಅರಳಿ, ದೇವೇಂದ್ರಪ್ಪ ಗಡೇದ, ರವಿ ಲಿಂಗಶೆಟ್ಟಿ, ಜ್ಞಾನೋಬಾ ಬೋಮಲೆ, ಸೋಮನಾಥ ಪೂಜಾರ, ರಾಘವೇಂದ್ರ ಪೂಜಾರ, ವಿನಯ ಪಾಟೀಲ, ಶಶಿಕಾಂತ ಕುಂಬಾರ, ಶಿವಣ್ಣ ಗಿಡಿಬಿಡಿ ಸೇರಿದಂತೆ ಅನೇಕರಿದ್ದರು.

## ಎನ್‌ಎಂಎಂಎಸ್ ಹಾಜರಾತಿ ಕಡ್ಡಾಯ



■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯೋಗ ಖಾತ್ರಿ ಯೋಜನೆಯ ಸಮುದಾಯ ಕಾಮಗಾರಿಗಳಲ್ಲಿ ಎನ್‌ಎಂಎಂಎಸ್ ಹಾಜರಾತಿ ಕಡ್ಡಾಯವಾಗಿದ್ದು, ಕೂಲಿಕಾರರು ಈ ಬಗ್ಗೆ ಜಾಗೃತಿ ವಹಿಸುವಂತೆ ತಾ.ಪಂ ಸಹಾಯಕ ನಿರ್ದೇಶಕ (GST) ಕುಮಾರ ಪೂಜಾರ ಹೇಳಿದರು.

ಸೋಮವಾರ ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ಪ್ರಾರಂಭವಾಗಿರುವ ಸಮುದಾಯ ಬದು ನಿರ್ಮಾಣ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಉದ್ಯೋಗ ಖಾತ್ರಿ ಗ್ರಾಮೀಣ ಭಾಗದ ಅಕುಶಲ ಕಾರ್ಮಿಕರ ಅಗತ್ಯತೆಗಳನ್ನು ಪೂರೈಸುವಲ್ಲಿ ಯಶಸ್ವಿಯಾಗಿದೆ. ಬೇಸಿಗೆಯಲ್ಲಿ ಕೂಲಿಕಾರ್ಮಿಕರಿಗೆ ಕೆಲಸದ ಅಭಾವವಿರುತ್ತದೆ. ಇದರ ಪರಿಹಾರಕ್ಕಾಗಿ ಉದ್ಯೋಗ ಖಾತ್ರಿ ಸಂಜೀವಿನಿಯಂತೆ ಕಾರ್ಯನಿರ್ವಹಿಸುತ್ತಿದೆ. ಇದರ ಸದ್ಬಳಕೆ ಎಲ್ಲ ಗ್ರಾಮೀಣರ ಕೈಯಲ್ಲಿ ಇದೆ ಎಂದರು.

2025ರ ಎಪ್ರಿಲ್‌ನಿಂದ ಕೂಲಿ ಮೊತ್ತ ಪರಿಷ್ಕರಿಸಲಾಗಿದ್ದು, ದಿನಕ್ಕೆ 370 ರೂ ಕೂಲಿ ಸಿಗಲಿದೆ. ಹಾಜರಾತಿಯಲ್ಲಿ ಎನ್‌ಎಂಎಂಎಸ್ ಆ್ಯಪ್ ಜಾರಿಗೆ ತಂದಿದ್ದು, ಎರಡು ಸಾರಿ ಹಾಜರಾತಿ ಕಡ್ಡಾಯವಾಗಿದೆ. ಅಳತೆಗನುಗುಣವಾಗಿ ಕೂಲಿ ಮೊತ್ತ ಪಾವತಿ ಮಾಡಲಾಗುತ್ತದೆ. ಬಿಎಫ್‌ಟಿ, ಜಿಕೆಎಂ ಮತ್ತು ಕಾಯಕ ಬಂದುಗಳು ಮಹಿಳಾ ಪಾಲ್ಗೊಳ್ಳುವಿಕೆ ಬಗ್ಗೆ ಹೆಚ್ಚು ಗಮನವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಐಇಸಿ ಸಂಯೋಜಕ ವೀರೇಶ ಬಸನಗೌಡ್ರ, ಎಸ್‌ಡಿಎ ಸಣ್ಣೀರಪ್ಪ ಪೂಜಾರ, ಟಿಎಇ ಪ್ರದೀಪ ನರೇಗಲ್ಲ, ಡಿಇಓ ಮೌಲಾಸಾಬ್ ಚಲ್ಲಮರದ, ಬಿಎಫ್‌ಟಿ ಸೋಮಶೇಖರ ತುರಬಿನ್, ಶಿವಾನಂದ ಹುಬ್ಬಳ್ಳಿ, ಇಮಾಮಸಾಬ್ ಖಾನಾಪುರ, ಬಸವರಾಜ ಮ್ಯಾಗೇರಿ, ಹುಸೇನಸಾಬ್ ಚಿಕ್ಕೊಪ್ಪ ಸೇರಿದಂತೆ ಕೂಲಿ ಕಾರ್ಮಿಕರು ಇದ್ದರು.

## ವಕ್ಫ್ ಬೋರ್ಡ್ ಚೇರ್ಮನ್ ಜಿ ಎಂ. ದಂಡಿನ ನಿಧನ

ಗದಗ: ವಕ್ಫ್ ಬೋರ್ಡ್ ಚೇರ್ಮನ್, ಕಾಂಗ್ರೆಸ್‌ನ ಹಿರಿಯ ಮುಖಂಡ ಜಿ.ಎಂ ದಂಡಿನ(68) ಹೃದಯಾಘಾತದಿಂದ ಸೋಮವಾರ ಬೆಳಗಿನ ಜಾವ ನಿಧನರಾಗಿದ್ದಾರೆ.

ಕಳೆದ 9 ವರ್ಷಗಳಿಂದ ಗದಗ ಜಿಲ್ಲಾ ವಕ್ಫ್ ಬೋರ್ಡ್ ಚೇರ್ಮನ್ ಆಗಿ ಕಾರ್ಯ ನಿರ್ವಹಿಸುತ್ತಿದ್ದ ಅವರು, ಜಿಲ್ಲೆಯಲ್ಲಿ ಮನೆ ಮಾತಾಗಿದ್ದರು. ಸೋಮವಾರ ಸಂಜೆ 5ಗಂಟೆಗೆ ಅಂತ್ಯಕ್ರಿಯೆ ಜರುಗಿತು.




ಮೃತರಿಗೆ ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ–ಬಂದು ಬಳಗವಿದೆ.

**ಸಂತಾಪ:** ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್ ಪಾಟೀಲ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರಾದ ಜಿ.ಎಂ ದಂಡಿನ ಅವರ ನಿಧನಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ.

### ಶ್ರೀರಾಮ ನವಮಿ ಅಂಗವಾಗಿ ಹಮ್ಮಿಕೊಂಡಿದ್ದ ಪಥಸಂಚಲನದಲ್ಲಿ ಪ್ರಮೋದ ಮುತಾಲಿಕ

## ಆಯುಧ ಪೂಜೆಗೆ ಶಸ್ತ್ರಗಳನ್ನೂ ಪೂಜಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ ಯುವಕರಲ್ಲಿ ದೇಶಭಕ್ತ, ಸ್ವಾತಂತ್ರ್ಯ ಹೋರಾಟಗಾರ ಸುಭಾಶ್ಚಂದ್ರ ಭೋಸ್ ಅವರ ಧೈರ್ಯ, ಶಕ್ತಿ, ಸಾಮರ್ಥ್ಯ, ಕ್ಷಾತ್ರ ತೇಜಸ್ಸು ಮೂಡಿಸುವ ಮೂಲಕ ಹಿಂದೂ ದೇಶ, ಧರ್ಮ, ಸಂಸ್ಕೃತಿ, ಸಂಪ್ರದಾಯದ ಶ್ರೀಮಂತಿಕೆ ಹೆಚ್ಚಿಸುವ ಮನೋಭಾವ ಬೆಳೆಸಬೇಕಾಗಿದೆ. ಈ ಕಾರ್ಯದಲ್ಲಿ ಶ್ರೀರಾಮ ಸೇನೆ ಕಂಕಣಬದ್ಧವಾಗಿದೆ ಎಂದು ಶ್ರೀರಾಮ ಸೇನೆಯ ಸಂಸ್ಥಾಪಕ ಅಧ್ಯಕ್ಷ ಪ್ರಮೋದ ಮುತಾಲಿಕ ಹೇಳಿದರು. ಅವರು ಭಾನುವಾರ ಶ್ರೀರಾಮ ನವಮಿ ಅಂಗವಾಗಿ ಸಂಘಟನೆಯಿಂದ ಹಮ್ಮಿಕೊಂಡಿದ್ದ ಪಥಸಂಚಲನ ನಂತರ ಇಲ್ಲಿನ ತೋಂಟದ್ದೇವರಮಠದಲ್ಲಿ ಜರುಗಿದ ಸಭೆಯನ್ನುದ್ದೇಶಿಸಿ ಮಾತನಾಡಿದರು. ಹಿಂದೂ ದೇಶದಲ್ಲಿಯೇ ಹಿಂದೂಗಳಿಗೆ ಬೆಲೆ, ಗೌರವ, ರಕ್ಷಣೆಯಿಲ್ಲದೇ 2ನೇ ದರ್ಜೆ ನಾಗರಿಕರಾಗಿ ಬದುಕು ಸಾಗಿಸುವಂತಾಗಿದೆ. ಇದಕ್ಕೆ ಈ ಹಿಂದೆ ಅಧಿಕಾರ ನಡೆಸಿದ ಕಾಂಗ್ರೆಸ್ ಪಕ್ಷವೇ ಕಾರಣ. ಓಟಿಗಾಗಿ ಮುಸ್ಲಿಂರ ಓಲೈಕೆ ಮಾಡುತ್ತ ಹಿಂದೂಗಳಲ್ಲಿ ಒಡಕು ಮೂಡಿಸುವ ಕೆಲಸವನ್ನು ನಿರಂತರವಾಗಿ ಮಾಡಿಕೊಂಡು



ಬರಲಾಗಿದೆ. ಹಿಂದೂ ರಾಷ್ಟ್ರದ ನಿರ್ಮಾಣಕ್ಕೆ ಕಂಕಣಬದ್ಧವಾಗಿರುವ ಹಿಂದೂ ಸಂಘಟನೆಗಳ ಧರ್ಮ ರಕ್ಷಣೆಯ ಕಾರ್ಯಕ್ಕೆ ಹಿಂದೂಗಳು ಕಾಯಾ–ವಾಚಾ–ಮನಸಾ ಕೈಜೋಡಿಸಬೇಕು. ಎಲ್ಲರಿಗೂ ಒಂದೇ ಕಾನೂನಿನ ಅಗತ್ಯವಿದೆ.

ವಕ್ಫ್ ಬೋರ್ಡ್ ಬಗ್ಗೆ ಸಂವಿಧಾನದಲ್ಲಿ ಉಲ್ಲೇಖ ಇಲ್ಲ. ವಕ್ಫ್‌ನ ಅಸಂವಿಧಾನಿಕ ದಬ್ಬಾಳಿಕೆಯನ್ನು ಸುಪ್ರೀಂ ಕೋರ್ಟ್‌ನಲ್ಲಿ ಸಹ ಪ್ರಶ್ನಿಸುವಂತಿಲ್ಲವಂತೆ. ಡಾ. ಅಂಬೇಡ್ಕರರ ಪರಮಶ್ರೇಷ್ಠವಾದ ಸಂವಿಧಾನ ಯಾವುದೇ ಧರ್ಮ, ಜಾತಿ ಆಧಾರಿತವಾಗಿಲ್ಲ. ಈ ತಾರತಮ್ಯಕ್ಕೆ, ತುಷ್ಟೀಕರಣಕ್ಕೆ ನರೇಂದ್ರ ಮೋದಿ ಸರ್ಕಾರ ಕಾನೂನಿನ ಮೂಲಕ ತಿಲಾಂಜಲಿ ಇಟ್ಟಿದೆ. ಇನ್ನು ದೇಶದಲ್ಲಿ ಮತಾಂತರ ದಂಧೆ ಅವ್ಯಾಹತವಾಗಿ ನಡೆಯುತ್ತಿದ್ದು, ಕ್ರಿಶ್ಚಿಯನ್ನರು ಶಿಕ್ಷಣ, ವೃದ್ಧಾಶ್ರಮ, ಆರೋಗ್ಯ ಮತ್ತು ಸಮಾಜ ಸೇವೆ ನೆಪದಲ್ಲಿ ಬಡವರು, ದೀನದಲಿತನ್ನು ಮತಾಂತರ ಮಾಡಿಕೊಳ್ಳುತ್ತಿದ್ದಾರೆ. ಸ್ವಾತಂತ್ರ್ಯ ಪಡೆದಾಗಿನಿಂದಲೂ ಕಾಂಗ್ರೆಸ್ ಮುಸ್ಲಿಮರಿಗೆ ಶ್ರೀರಕ್ಷೆಯಾಗಿದೆ.

> ಸುಭಾಶ್ಚಂದ್ರ ಬೋಸ್, ಶಿವಾಜಿ ಮಹಾರಾಜ, ಸಂಗೊಳ್ಳಿ ರಾಯಣ್ಣ ನಮಗೆ ಪ್ರೇರಣೆಯಾಗಬೇಕು. ಇನ್ನು ಮುಂದೆ ಆಯುಧ ಪೂಜೆ ವೇಳೆ ಹಿಂದೂಗಳು ಕೇವಲ ಕೃಷಿ ಪರಿಕರಗಳಷ್ಟೇ ಅಲ್ಲದೇ ಶಸ್ತ್ರಗಳನ್ನು ಪೂಜಿಸುವಂತಾಗಬೇಕು. ಲವ್ ಜಿಹಾದ್ ಹೆಸರಿನಲ್ಲಿ ನೇಹಾ ಹಿರೇಮಠ ಕಗ್ಗೊಲೆಯಾಗಿ ಎ.18ಕ್ಕೆ ವರ್ಷವಾದರೂ ನೀಚನಿಗೆ ಶಿಕ್ಷೆ ಕೊಡಿಸದ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರವಿರಲಿ. ಅಂದು ಹುಬ್ಬಳ್ಳಿಯಲ್ಲಿ 1000 ಹಿಂದೂ ಹೆಣ್ಣು ಮಕ್ಕಳಿಗೆ ತ್ರಿಶೂಲ ದೀಕ್ಷೆ ಕೊಡುವ ಮೂಲಕ ಜಿಹಾದಿಗಳಿಗೆ ಎಚ್ಚರಿಕೆ ಸಂದೇಶ ನೀಡಲಾಗುವುದು.
>
> – ಪ್ರಮೋದ ಮುತಾಲಿಕ.
> ಶ್ರೀರಾಮ ಸೇನೆ ಸಂಸ್ಥಾಪಕ ಅಧ್ಯಕ್ಷ.

ಎಂತಹದ್ದೇ ದುಷ್ಟಶಕ್ತಿ ಹಿಂದೂ ಧರ್ಮ, ದೇವರು, ಸ್ತ್ರೀ, ಗೋಮಾತೆ, ಸಂಸ್ಕೃತಿಗೆ ಧಕ್ಕೆ ತಂದರೆ ಸಹನೆ ಮೀರಿ ಬುದ್ಧಿ ಕಲಿಸಲು ಸಿದ್ಧರಾಗಬೇಕಾಗುತ್ತದೆ. ಮತಾಂತರ, ಲವ್ ಜಿಹಾದ್, ಗೋಹತ್ಯೆ ತಡೆಯುವದರೊಂದಿಗೆ ಹಿಂದೂಗಳಿಗೆ ಆಗುವ ಅನ್ಯಾಯಗಳ ವಿರುದ್ಧ ನಮ್ಮ ಸಂಘಟನೆಯವರು ಎಂತದ್ದೇ ಹೋರಾಟಕ್ಕೂ ಸನ್ನದ್ಧರಾಗಿರುತ್ತಾರೆ ಎಂದರು. ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿದರು. ಈ ಸಂದರ್ಭದಲ್ಲಿ ಶ್ರೀರಾಮ ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಸೋಮು ಗುಡಿ, ಲಕ್ಷ್ಮೇಶ್ವರ ತಾಲೂಕು ಘಟಕದ ಅಧ್ಯಕ್ಷ ಈರಣ್ಣ ಪೂಜಾರ, ಸುನೀಲ ಮಹಾಂತಶೆಟ್ಟರ, ಗಂಗಾಧರ ಮೆಣಸಿನಕಾಯಿ, ಗದಗ ತಾಲೂಕಾಧ್ಯಕ್ಷ ಭರತ ಲದ್ದಿ, ರಾಜ್ಯ ಶಾರೀರಿಕ ಪ್ರಮುಖ ಮಹೇಶ ರೋಖಡೆ, ಹುಲಿಗೆಪ್ಪ ವಾಲ್ಮೀಕಿ, ಅಮಿತ ಗುಡಗೇರಿ, ಬಸವರಾಜ ಚಕ್ರಸಾಲಿ, ಮುತ್ತು ಕರ್ಜಕಣ್ಣವರ, ಪ್ರಾಣೇಶ ವ್ಯಾಪಾರಿ, ಗಣೇಶ ಕುಂಬಾರ, ಹನುಮಂತ ರಾಮಗೇರಿ, ಚಿನ್ನು ಹಾಳದೋಟದ, ಪ್ರವೀಣ ಬನ್ನಿಕೊಪ್ಪ, ಮಂಜುನಾಥ ಕೊಡಳ್ಳಿ ಮುಂತಾದವರಿದ್ದರು. ಶಂಭುಲಿಂಗ ಅಂಗಡಿ ನಿರ್ವಹಿಸಿದರು.

## ಮೌಲ್ಯಮಾಪನ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಮಾರ್ಚ್ / ಎಪ್ರಿಲ್ 2025 ರ ಮಾಹೆಯಲ್ಲಿ ನಡೆಸಿದ ಎಸ್.ಎಸ್.ಎಲ್. ಸಿ ಪರೀಕ್ಷೆ ಉತ್ತರ ಪತ್ರಿಕೆಯ ಮೌಲ್ಯಮಾಪನ ಕಾರ್ಯವು ಗದಗ ನಗರದ 06 ಮೌಲ್ಯಮಾಪನ ಕೇಂದ್ರಗಳಲ್ಲಿ ಎಪ್ರಿಲ್ 15 ರಿಂದ ಎಪ್ರಿಲ್ 24 ರ ವರಗೆ ನಡೆಯಲಿದೆ. ಈ ಪರೀಕ್ಷಾ ಮೌಲ್ಯಮಾಪನಗಳು ಸುಗಮವಾಗಿ ಜರುಗುವ ಮತ್ತು ಶಿಸ್ತು , ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮೌಲ್ಯಮಾಪನ ಕಾರ್ಯಗಳಿಗಾಗಿ ನೇಮಿಸಲಾದ ಸಿಬ್ಬಂದಿಯ ಹೊರತಾಗಿ ಬೇರೆ ಯಾವುದೇ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಮೌಲ್ಯಮಾಪನ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ಎಪ್ರಿಲ್ 15 ರಿಂದ 24 ರವರೆಗೆ ಮೌಲ್ಯಮಾಪನ ಕಾರ್ಯಗಳಿಗಾಗಿ ನೇಮಿಸಲಾದ ಸಿಬ್ಬಂದಿಯನ್ನು ಹೊರತುಪಡಿಸಿ ಬೇರೆ ಯಾವುದೇ ಅನಧಿಕೃತ ವ್ಯಕ್ತಿಗಳ ಅಥವಾ ವ್ಯಕ್ತಿಯ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ತಿಳಿಸಿದ್ದಾರೆ.**ಮೌಲ್ಯಮಾಪನ ಕೇಂದ್ರಗಳ ವಿವರ ಇಂತಿದೆ** ಸೇಂಟ್ ಜಾನ್ ಪ್ರೌಢಶಾಲೆ, ಗದಗ ಬೇಟಗೇರಿ; ಲೊಯೋಲಾ ಪ್ರೌಢಶಾಲೆ, ಪಾಲಾ ಬದಾಮಿ ರಸ್ತೆ ಗದಗ ; ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಒಕ್ಕಲಗೇರಿ ಗದಗ ; ಮಹಾವೀರ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಕನಕ ಭವನ ಹತ್ತಿರ ಗದಗ; ಜಗದ್ಗುರು ತೋಂಟದಾರ್ಯ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಭೂಮರಡ್ಡಿ ಸರ್ಕಲ್ ಹತ್ತಿರ ಗದಗ; ಬಸವೇಶ್ವರ ಪ್ರಾಥಮಿಕ ಶಾಲೆ ಗದಗ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka